# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 199 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 27–02–2025 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 199 | RNI No: KARKAN/2023/88462 | KA/SK/CTA-874/2024-2026 | Chitradurga | Date: 27-02-2025 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ನಗರದ ವಿವಿದೆಡೆ ಶಿವರಾತ್ರಿ ಪ್ರಯುಕ್ತ ವಿಶೇಷ ಪೂಜೆ 2

ಈದ್ಗಾ ಮೈದಾನ: 40 ಲಕ್ಷ ವೆಚ್ಚದ ಸ್ಲಾಬ್ ಕಾಮಗಾರಿ ವೀಕ್ಷಿಸಿದ ಟಿ.ರಘುಮೂರ್ತಿ 3

ಮೊಳಕಾಲ್ಮೂರು ಆರ್ಥಿಕವಾಗಿ ಹಿಂದುಳಿದಿದೆ: ಶಾಸಕ ಶ್ರೀನಿವಾಸ್ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ನಿಗಮ ಮಂಡಳಿಗಳಿಗೆ ನೇಮಕ, ಬ್ಲಾಕ್ ಅಧ್ಯಕ್ಷರಿಗೆ ಆದ್ಯತೆ: ಡಿಸಿಎಂ ಡಿಕೆಶಿ

» ಬೆಂಗಳೂರು

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಿಗೆ ನಿಗಮ ಮಂಡಳಿ ನೇಮಕದಲ್ಲಿ ಮೊದಲು ಆದ್ಯತ ನೀಡಲಾಗುವುದು ಎಂದು ಡಿಸಿಎಂ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ತಿಳಿಸಿದರು.ನಿಗಮ ಮಂಡಳಿ ನೇಮಕದಲ್ಲಿ ಪಟ್ಟಿ ಬಿಡುಗಡೆಯಾಗಿಲ್ಲ ಎಂಬ ವಿಚಾರಕ್ಕೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ನಾನು ಪಟ್ಟಿ ತರಿಸಿಕೊಂಡಿದ್ದು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಿಗೆ ಆದ್ಯತೆ ನೀಡಬೇಕು ಎಂಬುವ ಉದ್ದೇಶ ನನ್ನದು.ಬ್ಲಾಕ್ ಅಧ್ಯಕ್ಷರು ಹಾಗೂ ಜಿಲ್ಲಾಧ್ಯಕ್ಷರುಗಳಿಗೆ ಸ್ಥಾನಮಾನ ನೀಡಬೇಕು ಎಂದು ಎಲ್ಲಾ ಶಾಸಕರಿಗೆ ಹೇಳಿದ್ದೇನೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್ ತಯಾರಿಯಲ್ಲಿ ನಿರತರಾಗಿದ್ದು, ನನ್ನ ಹಾಗೂ ಸಣ್ಣ ನೀರಾವರಿ ಇಲಾಖೆ ಜತೆ ಸಭೆ ಮಾತ್ರ ಬಾಕಿ ಇದೆ. ನಮ್ಮ ಅಧಿಕಾರಿಗಳು ದೆಹಲಿಯಲ್ಲಿದ್ದ ಕಾರಣ ಸಭೆ ಮಾಡಲು ಆಗಿರಲಿಲ್ಲ ಎಂದರು.ಪದಾಧಿಕಾರಿಗಳ ಪಟ್ಟಿಯಲ್ಲಿ ಕೆಲಸ ಮಾಡುವವರಿಗೆ ಆದ್ಯತೆ ನೀಡಲಾಗುವುದು ಎಂಬ ಮಾಧ್ಯಮದವರ ಪ್ರಶ್ನೆಗೆ "ನಮ್ಮ ಪಕ್ಷದಲ್ಲಿ ಮೂರು ಹಂತಗಳಿವೆ. ಉಪಾಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು. ಕಾರ್ಯದರ್ಶಿಗಳ ಪಟ್ಟಿಯನ್ನು ನೀಡಿದ್ದೆ ಅದಕ್ಕೆ ಒಪ್ಪಿಗೆ ನೀಡಿರಲಿಲ್ಲ. ಹೀಗಾಗಿ ಅವರನ್ನು ಕರೆದು ಚರ್ಚೆ ಮಾಡಿದ್ದೆ. ಈಗ ಸಚಿವರ ಜತೆ ಚರ್ಚೆ ಮಾಡಿದ್ದು, ಅವರ ಜಿಲ್ಲೆಯಲ್ಲಿ ಪಕ್ಷಕ್ಕೆ ಸಮಯ ಕೊಟ್ಟು ದುಡಿಯುವವರಿದ್ದರೆ ಹೆಸರು ನೀಡಿ ಎಂದು ಹೇಳಿದ್ದೇನೆ. ನನ್ನ ಹಿಂದೆ ತಿರುಗುವವರಿಗೆ ಹುದ್ದೆ ನೀಡುವುದಲ್ಲ. ನಾವು ನೇಮಕ ಮಾಡಿದರೆ ಮುಂದಿನ ಮೂರು ವರ್ಷ ಕೆಲಸ ಮಾಡಬೇಕು. ಅಂತಹವರ ಹೆಸರು ನೀಡಿ ಎಂದು ಕೇಳಿದ್ದೇನೆ" ಎಂದುವ ವಿವರಿಸಿದರು.ವಿಧಾನ ಪರಿಷತ್ ನಾಮನಿರ್ದೇಶನದ ವಿಚಾರವಾಗಿ ನಾನು ಹಾಗೂ ಸಿಎಂ ದೆಹಲಿಗೆ ಹೋಗಬೇಕು. ಬಜೆಟ್ ತಯಾರಿ ಮುಗಿದ ಬಳಿಕ ಈ ವಿಚಾರದ ಬಗ್ಗೆ ಗಮನಹರಿಸುತ್ತೇವೆ. ಸಿದ್ದರಾಮಯ್ಯ ಅವರು ಚೇತರಿಸಿಕೊಂಡಿದ್ದು, ಇನ್ನು ನಡೆದಾಡಲು ಸಾಧ್ಯವಾಗಿಲ್ಲ ಎಂದು ಹೇಳಿದರು.

### ಕಾಂಗ್ರೆಸ್ ಜಿಲ್ಲಾಧ್ಯಕ್ಷರ ಬದಲಾವಣೆ ಫಿಕ್ಸ್, ಯಾರಿಗೆಲ್ಲ ಗೇಟ್‌ಪಾಸ್?

ರಾಜ್ಯ ಕಾಂಗ್ರೆಸ್‌ನಲ್ಲಿ ಮಹತ್ವದ ಬೆಳವಣಿಗೆ ನಡೆಯುತ್ತಿದೆ. ಸಿಎಂ ಬದಲಾವಣೆ, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಜೊತೆಗೆ ಇದೀಗ ಕಾಂಗ್ರೆಸ್ ಜಿಲ್ಲಾಧ್ಯಕ್ಷರ ಬದಲಾವಣೆ ವಿಚಾರದ ಬಗ್ಗೆ ಕೂಡ ಚರ್ಚೆಯಾಗುತ್ತಿದೆ. ರಾಜ್ಯದ ಜಿಲ್ಲಾ ಘಟಕಗಳ ಅಧ್ಯಕ್ಷರಬದಲಾವಣೆಮಾಡಲುಕೆಪಿಸಿಸಿಅಧ್ಯಕ್ಷರಾದ ಡಿ.ಕೆ.ಶಿವಕುಮಾರ್ ಅವರು ಮುಂದಾಗಿದ್ದಾರೆ ಎಂದು ತಿಳಿದುಬಂದಿದೆ. ದಿಢೀರ್ ಜಿಲ್ಲಾಧ್ಯಕ್ಷರ ಬದಲಾವಣೆಗೂ ಬಲವಾದ ಕಾರಣವೂ ಇದೆ. ನಿನ್ನೆ ದೆಹಲಿಗೆ ಹೋಗಿದ್ದ ಡಿಕೆ ಶಿವಕುಮಾರ್ ಅವರು ಹೈಕಮಾಂಡ್ ನಾಯಕರ ಜೊತೆ ಈ ವಿಚಾರದ ಬಗ್ಗೆಯೂ ಚರ್ಚಿಸಿದ್ದಾರಂತೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಜಿಲ್ಲಾ ಘಟಕದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳನ್ನು ಬದಲಾಯಿಸುವುದಾಗಿ ಪಕ್ಷದ ವರಿಷ್ಠರಿಗೆ ತಿಳಿಸಿದ್ದಾರೆ ಎನ್ನಲಾಗಿದೆ. ಇನ್ನೇನು ಶೀಘ್ರದಲ್ಲೇ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಬಿಬಿಎಂಪಿ ಚುನಾವಣೆಗಳು ಸಮೀಪಿಸುತ್ತಿರುವುದರಿಂದ ಪಕ್ಷವನ್ನು ಬಲಗೊಳಿಸಲು ಜಿಲ್ಲಾಧ್ಯಕ್ಷರ ಬದಲಾವಣೆ ಮಾಡಲಿದ್ದಾರೆ. ರಾಜ್ಯದಲ್ಲಿ ಬಜೆಟ್ ಅಧಿವೇಶನದ ನಂತರ ಎಲ್ಲ ಸಚಿವರು ಕೂಡ ಕಡ್ಡಾಯವಾಗಿ ಜಿಲ್ಲಾ ಪ್ರವಾಸ ಮಾಡಬೇಕು ಹಾಗೂ ಅಲ್ಲಿನ ಪಕ್ಷದ ಕಚೇರಿಗಳಿಗೆ ಭೇಟಿ ನೀಡಿ ಜಿಲ್ಲೆಗಳಲ್ಲಿ ಕಾರ್ಯಕರ್ತರ ಸಂಕಷ್ಟಗಳನ್ನು ಆಲಿಸಬೇಕು. ಅವರನ್ನು ಮುಂಬರುವ ಸ್ಥಳೀಯ ಸಂಸ್ಥೆಯ ಚುನಾವಣೆಗಳಿಗೆ ಸಜ್ಜುಗೊಳಿಸಿ, ಕಾಂಗ್ರೆಸ್ ಗೆಲುವಿಗೆ ಶ್ರಮ ಪಟ್ಟು ಕೆಲಸ ಮಾಡುವಂತೆ ಪ್ರೇರೇಪಿಸಬೇಕು ಎಂದೂ ಸೂಚನೆ ನೀಡಿದ್ದಾರೆ. ಇತ್ತೀಚೆಗೆ ಕೆಪಿಸಿಸಿ ಕಚೇರಿಯಲ್ಲೂ ಈ ಬಗ್ಗೆ ಮಾತನಾಡಿದ್ದ ಡಿಕೆ.ಶಿವಕುಮಾರ್ ಅವರು 2023ರ ವಿಧಾನಸಭಾ ಚುನಾವಣೆಯ ಪರಾಜಿತ ಕಾಂಗ್ರೆಸ್ ಅಭ್ಯರ್ಥಿಗಳೊಂದಿಗೆ ಸಭೆ ನಡೆಸಿದ್ದರು. ಪಕ್ಷವನ್ನು ಇನ್ನಷ್ಟು ಬಲವರ್ಧನೆಗೊಳಿಸಲು ವಿಶೇಷ ಸಭೆ ನಡೆಸಿ ಸೋತ ಅಭ್ಯರ್ಥಿಗಳಿಗೆ ಮುಂದಿನ ಚುನಾವಣೆಗೆ ಹೇಗೆ ತಯಾರಿ ಮಾಡಿಕೊಳ್ಳಬೇಕು ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಹೇಗೆ ಸಜ್ಜಾಗಬೇಕು ಎಂದೂ ಸೂಚನೆ ನೀಡಿದ್ದರು.

ಪುಟ 2

# ಮಳಿಗೆ ಹರಾಜು ಮುಂದೂಡಿದ ಪೌರಯುಕ್ತೆ ವಿರುದ್ದ ನಗರಸಭೆ ಅಧ್ಯಕ್ಷೆ ಸುಮಿತ ಅಕ್ರೋಶ

» ನಮ್ಮಜನ ಸಮಾಚಾರ

ಚಿತ್ರದುರ್ಗ: ಚಿತ್ರದುರ್ಗ ನಗರಸಭೆ ವ್ಯಾಪ್ತಿಯಲ್ಲಿನ 37 ಮಳಿಗೆ ಹರಾಜು ಪ್ರಕ್ರಿಯೆ ವಿಚಾರದಲ್ಲಿ ಮ ಮಂಗಳವಾರ ಏಕಾಏಕಿ ಹರಾಜು ಪ್ರಕ್ರಿಯೆ ಮುಂದೂಡಲಾಗಿದೆ ಎಂಬ ನಗರಸಭೆ ಪೌರಯುಕ್ತರ ನಡೆಗೆ ನಗರಸಭೆ ಅಧ್ಯಕ್ಷೆ ಸುಮಿತಾ ಮತ್ತು ಉಪಾಧ್ಯಕ್ಷ, ಸದಸ್ಯರು ಕಿಡಿಕಾರಿದ ಘಟನೆ ಚಿತ್ರದುರ್ಗ ನಗರಸಭೆಯಲ್ಲಿ ನಡೆಯಿತು.

ಮಳಿಗೆಗಳ ಹರಾಜು ಪ್ರಕ್ರಯೆಗೆ ಬಂದಿದ್ದ ಹರಾಜು ಕೂಗುವವರು ನಗರಸಭೆ ಪೌರಯುಕ್ತರ ವಿರುದ್ದ ತೀವ್ರ ಆಕ್ರೋಶ ಹೊರ ಹಾಕಿ, ನಮಗೆ ಮಾಹಿತಿ ಇಲ್ಲದೆ ಹರಾಜು ಮುಂದೆ ಹಾಕಿರುವುದು ಯಾವ ಉದ್ದೇಶಕ್ಕೆ ಎಂಬ ಸ್ಪಷ್ಟವಾಗಿ ತಿಳಿಸಿ ಎಂದು ನಗರಸಭೆ ಅಧ್ಯಕ್ಷೆ ಸುಮಿತ ಅವರನ್ನು ಪ್ರಶ್ನಿಸಿದಾಗ ಅವರು ನನಗೆ ವ್ಯಾಟ್ಸಪ್ ಸಂದೇಶ ರಾತ್ರಿ 12–10 ನಿಮಿಷಕ್ಕೆ ಕಳಿಸಿದ್ದಾರೆ ಮತ್ತು ಹರಾಜು ಮುಂದೂಡುವ ಅಧಿಕಾರ ಪೌರಾಯುಕ್ತರಿಗೆ ಇಲ್ಲ ಎಂದು ಸಿಡಿಮಿಡಿಗೊಂಡರು.

ನಗರಸಭೆಯ 37 ಮಳಿಗೆ ಹರಾಜಿಗೆ ಪತ್ರಿಕಾ ಪ್ರಕಟಣೆ ಹೊರಡಿಸಿ ಹರಾಜಿಗೆ ಫೆ.25ರ ಮಂಗಳವಾರ ಬೆಳಗ್ಗೆ 11 ಗಂಟೆಗೆ ದಿನಾಂಕ ನಿಗದಿ ಮಾಡಲಾಗಿತ್ತು.



### ಗೋಡೆ ಮೇಲೆ ಹರಾಜು ಮುಂದೂಡಿದ ಪ್ರತಿಗೆ ಕಮಿಷನರ್ ಸಹಿ ಇಲ್ಲ

ನಗರಸಭೆಗ ಗೋಡೆ ಮೇಲೆ ಹರಾಜು ಮುಂದೂಡಿದ ಪತ್ರ ಅಂಟಿಸಲಾಗಿದೆ. ಅದರಲ್ಲಿ ಪೌರಾಯುಕ್ತರ ಸಹಿ ಇಲ್ಲ. ಕಷ್ಟಪಟ್ಟು ಡಾಕ್ಯುಮೆಂಟ್ ರೆಡಿಮಾಡಿಕೊಂಡು ಬಂದಿದ್ದೇವೆ. ಈಗ ಹರಾಜು ರದ್ದು ಮಾಡಿದರೆ ಹೇಗೆ. ರಾತ್ರೋ ರಾತ್ರಿ ಮುಂದೂಡುವ ನಿರ್ಧಾರ ಕೈಗೊಳ್ಳುವ ಅಗತ್ಯವಾದರೂ ಏನಿತ್ತೆಂದು ಬಿಡ್ ದಾರರು ಅಧ್ಯಕ್ಷರನ್ನು ಪ್ರಶ್ನಿಸಿದರು. ಒಂದು ತಿಂಗಳ ಮುಂಚೆ ಹರಾಜು ಪ್ರಕ್ರಿಯೆ ಮಾಡಲಾಗಿತ್ತು. ಕಳೆದ ಐದು ತಿಂಗಳಿಂದ ಹರಾಜು ಪ್ರಕ್ರಿಯೆ ಆಗಿರಲಿಲ್ಲ, ಆದ್ದರಿಂದ. ಇಟ್ಲರ್ ಆಡಳಿತವನ್ನು ಪೌರಯುಕ್ತೆ ರೇಣುಕಾ ನಡೆಸುತ್ತಿದ್ದು ಸರ್ವಾಧಿಕಾರಿ ವರ್ತನೆ ನಡೆಯಲ್ಲ, ಜನಪರ ಆಡಳಿತಕ್ಕೆ ನಾವು ಬಂದಿದ್ದೇವೆ ಎಂದು ಅಧ್ಯಕ್ಷೆ ಸುಮಿತಾ ಅವರು ಪೌರಯುಕ್ತರಿಗೆ ಟಾಂಗ್ ನೀಡಿದ್ದು ಮುಂದೆ ಯಾವ ರೀತಿ ಇವೆ ಬೆಳವಣಿಗೆ ನಡೆಯಲಿದೆ ಎಂಬುದನ್ನಯ ಕಾದು ನೋಡಬೇಕಿದೆ. ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ನಸ್ರುಲಾ, ನಗರಸಭೆ ಸದಸ್ಯ ದೀಪು ಇದ್ದರು.

ಅದರಂತೆ ಬಿಡ್ ದಾರರು ಇಎಂಡಿ ಮೊತ್ತ ಡಿಡಿ ಸಂಗಡ ನಗರಸಭೆಗೆ ಆಗಮಿಸಿದ್ದರು. ಅಧ್ಯಕ್ಷೆ ಸುಮಿತಾ, ಉಪಾಧ್ಯಕ್ಷೆ ಶ್ರೀದೇವಿ, ಸ್ಥಾಯಿ ಸಮಿತಿ ಅಧ್ಯಕ್ಷ ನಸ್ರುಲ್ಲಾ ಬಿಡ್ ನಡೆಸಲುಸಭಾಂಗಣದಲ್ಲಿ ಕಾದು ಕುಳಿತರು ಅಧಕ್ಷರ ಗನಮಕ್ಕೂ ಸೌಜನ್ಯಕ್ಕೂ ತಿಳಿಸದೇ. ಪೌರಾಯುಕ್ತ ರೇಣುಕಾ ಸೇರಿದಂತೆ ಯಾವೊಬ್ಬ ನಗರಸಭೆ ಸಿಬ್ಬಂದಿಯೂ ನಗರಸಭೆ ಕೆಲಸಕ್ಕೆ ಹಾಜರಾಗದೇ ಇರುವುದು ಅಧ್ಯಕ್ಷರನ್ನು ಮತ್ತಷ್ಟು ಕೆರಳಿಸಿತು.

ಅಧ್ಯಕ್ಷರ ಗಮನಕ್ಕೂ ಬಾರದೇ ಸಭೆ ಮುಂದೂಡಿದ ಪೌರಯುಕ್ತೆ ರೇಣುಕಾ

ಅಧ್ಯಕ್ಷೆ ಸುಮಿತಾ, ನಮ್ಮ ಗಮನಕ್ಕೆ ಬಾರದಂತೆ ಪೌರಾಯುಕ್ತರು ಹರಾಜು ಮುಂದೂಡಿದ್ದಾರೆ.ರಾತ್ರಿ12.20ಕ್ಕೆವಾಟ್ಸಾಪ್ ನಲ್ಲಿ ಮುಂದೂಡಿದ ಪತ್ರ ಹಾಕಿದ್ದಾರೆ. ಹರಾಜು ನಡೆಸಲು ಬರುವಂತೆ ಕಾಲ್ ಮಾಡಿದರೂ ಕರೆ ಸ್ವೀಕರಿಸುತ್ತಿಲ್ಲವೆಂದು ದೂರಿದರು. ಇವರಿಗೆ ದಿಶಾ ಸಭೆ ಇದೆ ಎಂದು ಮೊದಲೇ ಗೊತ್ತಿತ್ತಲ್ಲ ಆದರು ಅದರ ನೆಪ ಮಾಡಿಕೊಂಡು ಹರಾಜು ಪ್ರಕ್ರಿಯೆ ಮುಂದೂಡಲು ಅವರಿಗೆ ಅಧಿಕಾರ ಕೊಟ್ಟವರ್ಯಾರು, ಸಭೆಯಲ್ಲಿ ಕುಳಿತುಕೊಂಡು ಕಾಲ್ ಪಿಕ್ ಮಾಡದೇ ಅಧಿಕಾರಿ ದರ್ಪ ಮೆರೆಯುತ್ತಿದ್ದು ಬಿಡ್ ದಾರರಿಗೆ ಬಂದು ಉತ್ತರಿಸಲಿ,ತಮ್ಮಿಷ್ಟದಂತೆ ತಾವು ನಡೆದುಕೊಂಡೇ ನಾವು ಸುಮ್ಮನಿರಲ್ಲ ಮುಂದೆ ತೋರಿಸ್ತಿವಿ ನಾವು ಏನು ಅಂತ ಏರು ಧ್ವನಿಯಲ್ಲಿ ಪೌರಯುಕ್ತೆ ರೇಣುಕಾ ವಿರುದ್ಧ ಅಕ್ರೋಶ ಹೊರಹಾಕಿದರು.

# ಮಾ.01 ರಂದು ಬೃಹತ್ ಉದ್ಯೋಗ ಮೇಳ

## 50ಕ್ಕೂ ಹೆಚ್ಚು ಕಂಪನಿಗಳಲ್ಲಿ 5000ಕ್ಕೂ ಹೆಚ್ಚು ಉದ್ಯೋಗಗಳು ಲಭ್ಯ
## ಯುವನಿಧಿ ಯೋಜನೆ ಫಲಾನುಭವಿಗಳು ಉದ್ಯೋಗ ಪಡೆಯಲು ಸದಾವಕಾಶ

» ಚಿತ್ರದುರ್ಗ

ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಕೌಶಲ್ಯ ಮಿಷನ್ ಚಿತ್ರದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ ಮಾ. 01 ರಂದು ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಸುಮಾರು 50 ಕ್ಕೂ ಹೆಚ್ಚು ಕಂಪನಿಗಳಲ್ಲಿ 5000 ಕ್ಕೂ ಹೆಚ್ಚು ಉದ್ಯೋಗಗಳು ಲಭ್ಯವಿದೆ.

ಹಲವಾರು ಪ್ರತಿಷ್ಠಿತ ಕಂಪನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಿ ಉದ್ಯೋಗ ನೀಡಲು ಸಮ್ಮತಿಸಿ ನೊಂದಣಿ ಮಾಡಿಕೊಂಡಿವೆ. ಈ ಪೈಕಿ ಕಿರ್ಲೋಸ್ಕರ್, ಎಲ್ ಅಂಡ್ ಟಿ, ನಂತಹ ಬೃಹತ್ ಕಂಪನಿಗಳು ಸೇರಿದಂತೆ ಫೈನಾನ್ಸ್, ಐಟಿ ಕಂಪನಿಗಳು, ಮೊಬೈಲ್ ಕಂಪನಿಗಳು, ಫರ್ಟಿಲೈಜರ್, ಆಟೋಮೊಬೈಲ್, ಗಾರ್ಮೆಂಟ್ಸ್, ಫಾರ್ಮ ಕಂಪನಿಗಳು ಪ್ರಮುಖವಾಗಿವೆ. ಈ ಎಲ್ಲ ಕಂಪನಿಗಳಲ್ಲಿ 5000 ಕ್ಕೂ ಹೆಚ್ಚು ಉದ್ಯೋಗಗಳು ಲಭ್ಯವಿದ್ದು, ಅಭ್ಯರ್ಥಿಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಿ, ಉದ್ಯೋಗವನ್ನು ತಮ್ಮದಾಗಿಸಿಕೊಳ್ಳಲು ಸುವರ್ಣಾವಕಾಶ ಒದಗಿಬಂದಿದೆ. ಈಗಾಗಲೆ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ನೊಂದಣಿ ಮಾಡಿಕೊಳ್ಳುವ ಪ್ರಕ್ರಿಯೆ ಪ್ರಾರಂಭವಾಗಿದ್ದು, ನೊಂದಣಿ ಕಾರ್ಯ ಕೂಡ ಅತ್ಯಂತ ಸರಳವಾಗಿದೆ. ಮೊಬೈಲ್‌ನಲ್ಲಿ, ಕಂಪ್ಯೂಟರ್‌ನಲ್ಲಿ https://forms.gle/7pTxbGPVKAFCSYaX7 ಈ ಲಿಂಕ್ ಕ್ಲಿಕ್ ಮಾಡಿದ ಬಳಿಕ ತೆರೆಯುವ ಗೂಗಲ್ ಫಾರ್ಮ್ ನಲ್ಲಿ ಅಭ್ಯರ್ಥಿಗಳು ತಮ್ಮ ಹೆಸರು, ವಿದ್ಯಾರ್ಹತೆ, ವಿಳಾಸ ಮುಂತಾದ ವೈಯಕ್ತಿಕ ವಿವರಗಳನ್ನು ಭರ್ತಿ ಮಾಡಿ, ಸಬ್‌ಮಿಟ್ ಮೇಲೆ ಕ್ಲಿಕ್ ಮಾಡಿದರೆ ಸಾಕು, ನೊಂದಣಿ ಪ್ರಕ್ರಿಯೆ ಪೂರ್ಣಗೊಳ್ಳುತ್ತದೆ. ಅದೇ ರೀತಿ ಚಿತ್ರದುರ್ಗ ಜಿಲ್ಲೆಯ ಅಧಿಕೃತ ಸರ್ಕಾರಿ ವೆಬ್‌ಸೈಟ್ https://chitradurga.nic.in/ ಮೂಲಕವೂ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಆನ್‌ಲೈನ್‌ನಲ್ಲಿ ನೊಂದಣಿ ಮಾಡಿಕೊಳ್ಳದೆ, ನೇರವಾಗಿ ಉದ್ಯೋಗ ಮೇಳಕ್ಕೆ ಆಗಮಿಸುವ ಅಭ್ಯರ್ಥಿಗಳಿಗೂ ಕೂಡ ಉದ್ಯೋಗ ಮೇಳ ಜರುಗುವ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಮಾ. 01 ರಂದು ಬೆಳಿಗ್ಗೆ 09 ಗಂಟೆಯಿಂದಲೇ ನೋಂದಣಿ ಮಾಡಿಕೊಳ್ಳಲು 5 ಕೌಂಟರ್ ಅನ್ನು ತೆರೆಯಲು ಸಿದ್ಧತೆ ಮಾಡಿಕೊಳ್ಳಲಾಗಿದ್ದು, ನೇರವಾಗಿ ಪಾಲ್ಗೊಳ್ಳಲು ಆಗಮಿಸುವ ಅಭ್ಯರ್ಥಿಗಳು ತಮ್ಮ ವೈಯಕ್ತಿಕ ವಿವರಗಳನ್ನು ನೀಡಿ ಕೌಂಟರ್‌ಗಳಲ್ಲಿ ನೊಂದಣಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್‌ನಲ್ಲಿ ನೊಂದಣಿ ಮಾಡಿಕೊಂಡವರಿಗೆ, ನೇರವಾಗಿ ಕಂಪನಿಗಳಲ್ಲಿ ಸಂದರ್ಶನಕ್ಕೆ ಅವಕಾಶ ದೊರೆಯಲಿದೆ. ಹೀಗಾಗಿ ಆನ್‌ಲೈನ್‌ನಲ್ಲಿ ನೊಂದಣಿ ಮಾಡಿಕೊಳ್ಳುವುದು ಸೂಕ್ತ.

ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮೋ ಹಾಗೂ ವಿವಿಧ ಪದವಿ ಹಾಗೂ ಸ್ನಾತಕೋತ್ತರ ಪದವಿ ಸೇರಿದಂತೆ ಎಲ್ಲಾ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳಿಗೂ ಉದ್ಯೋಗ ಮೇಳದಲ್ಲಿ ಉದ್ಯೋಗಗಳು ಲಭ್ಯವಿದ್ದು, ಉದ್ಯೋಗ ಆಸಕ್ತ ಯುವಕ, ಯುವತಿಯರು ಭಾಗವಹಿಸಿ, ಉದ್ಯೋಗ ಪಡೆಯಬಹುದು.

ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ ಡಿಪ್ಲೋಮಾ, ಪದವಿ ಪಡೆದಿರುವ ಸುಮಾರು 4300 ಕ್ಕೂ ಹೆಚ್ಚು ಯುವಕ, ಯುವತಿಯರು ನಿರುದ್ಯೋಗ ಭತ್ಯೆ ಪಡೆಯುತ್ತಿದ್ದು, ಎಲ್ಲ ಅಭ್ಯರ್ಥಿಗಳು ಕೂಡ ಈ ಉದ್ಯೋಗಮೇಳದಲ್ಲಿ ಪಾಲ್ಗೊಳ್ಳಲು ಜಿಲ್ಲಾಡಳಿತ ವಿಶೇಷ ಆಹ್ವಾನ ನೀಡುತ್ತಿದ್ದು, ಈ ಯೋಜನೆಯ ಅಭ್ಯರ್ಥಿಗಳು ಕೂಡಲೆ ನೊಂದಣಿ ಮಾಡಿಕೊಂಡು, ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳಬಹುದಾಗಿದೆ.

ಉದ್ಯೋಗ ಮೇಳದ ಬಗ್ಗೆ ವ್ಯಾಪಕ ಪ್ರಚಾರ ನೀಡುವ ಸಲುವಾಗಿ ಈಗಾಗಲೆ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ಕಸ ವಿಲೇವಾರಿ ವಾಹನಗಳಲ್ಲಿನ ಧ್ವನಿವರ್ಧಕದ ಮೂಲಕ ಉದ್ಯೋಗ ಮೇಳದ ಕುರಿತು ಜಿಂಗಲ್ಸ್ ಹಾಗೂ ಸಂದೇಶ ನೀಡುವ ಮೂಲಕ ಪ್ರಚಾರವನ್ನು ಸಹ ಕೈಗೊಳ್ಳಲಾಗಿದೆ ಎಂದು ಚಿತ್ರದುರ್ಗ ಜಿಲ್ಲಾಡಳಿತದ ಪ್ರಕಟಣೆ ತಿಳಿಸಿದೆ. https://forms.gle/7pTxbGPVKAFCSYaX7

# ಗರ್ಭ ಧರಿಸಿದ್ದೇ ಗೊತ್ತಿಲ್ಲದೆ ಹಾಸ್ಟೆಲ್‌ನಲ್ಲಿ ಮಗುವಿಗೆ ಜನ್ಮ ನೀಡಿದ 10ನೇ ತರಗತಿ ಬಾಲಕಿ

» ಭುವನೇಶ್ವರ

ಒಡಿಶಾದ ಮಲ್ಕನ್‌ಗಿರಿ ಜಿಲ್ಲೆಯ ಸರ್ಕಾರಿ ವಸತಿ ಶಾಲೆಯ ಹಾಸ್ಟೆಲ್‌ನಲ್ಲಿ 10ನೇ ತರಗತಿಯ ವಿದ್ಯಾರ್ಥಿನಿಯೊಬ್ಬಳು ಹೆಣ್ಣು ಮಗುವಿಗೆ ಜನ್ಮ ನೀಡಿದ ಆಘಾತಕಾರಿ ಘಟನೆ ನಡೆದಿದೆ. ಈ ಘಟನೆಯ ನಂತರ ತನಿಖೆ ಆರಂಭಿಸಲಾಗಿದೆ. ಬೋರ್ಡ್ ಪರೀಕ್ಷೆ ಬರೆದು ಹಾಸ್ಟೆಲ್‌ಗೆ ವಾಪಾಸ್ ಬಂದಿದ್ದ ಬಾಲಕಿಗೆ ಸೋಮವಾರ ಹೆರಿಗೆ ನೋವು ಕಾಣಿಸಿಕೊಂಡಾಗ ಈ ಘಟನೆ ಬೆಳಕಿಗೆ ಬಂದಿದೆ.

ಇಂದು ಪೊಲೀಸರು ಈ ಘಟನೆಯನ್ನು ದೃಢಪಡಿಸಿದ್ದು, ಈ ಘಟನೆಗೆ ಕಾರಣವಾದ ಸಂದರ್ಭಗಳನ್ನು ನಿರ್ಧರಿಸಲು ತನಿಖೆ ನಡೆಯುತ್ತಿದೆ ಎಂದು ಹೇಳಿದ್ದಾರೆ. ಶಾಲಾ ಆಡಳಿತ ಮತ್ತು ಹಾಸ್ಟೆಲ್ ಮೇಲ್ವಿಚಾರಣೆಯಲ್ಲಿನ ಲೋಪಗಳ ಬಗ್ಗೆಯೂ ಶಾಲಾ ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.

“ಹುಡುಗಿಯರ ಹಾಸ್ಟೆಲ್‌ನಲ್ಲಿ ಪುರುಷರಿಗೆ ಪ್ರವೇಶವಿಲ್ಲ. ಅವಳು ಹೇಗೆ ಗರ್ಭಿಣಿಯಾದಳು ಎಂಬುದೇ ನಮಗೆ ತಿಳಿದಿಲ್ಲ. ಆರೋಗ್ಯ ಕಾರ್ಯಕರ್ತರು ಹಾಸ್ಟೆಲ್‌ನಲ್ಲಿ ವಾಸಿಸುವ ಎಲ್ಲಾ ವಿದ್ಯಾರ್ಥಿಗಳನ್ನು ವಾರಕ್ಕೊಮ್ಮೆ ತಪಾಸಣೆ ಮಾಡಬೇಕು. ಆದರೆ, ಆರೋಗ್ಯ ಕಾರ್ಯಕರ್ತೆ ತನ್ನ ಕೆಲಸವನ್ನು ಮಾಡುತ್ತಿಲ್ಲ ಎಂದು ಈ ಘಟನೆಯಿಂದ ಸಾಬೀತಾಗಿದೆ” ಎಂದು ಅಧಿಕಾರಿಗಳು ಹೇಳಿದ್ದಾರೆ. ಬಾಲಕಿ ಮತ್ತು ಮಗುವನ್ನು ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಲಾಯಿತು. ನಂತರ ಮಲ್ಕನ್‌ಗಿರಿ ಜಿಲ್ಲಾ ಕೇಂದ್ರ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಗು ಮತ್ತು ತಾಯಿ ಇಬ್ಬರೂ ಆರೋಗ್ಯವಾಗಿದ್ದಾರೆ. ಬಾಲಕಿಗೆ ಹೆರಿಗೆಯಾಗುವವರೆಗೂ ಗರ್ಭ ಧರಿಸಿರುವುದು ಯಾಕೆ ಯಾರಿಗೂ ಗೊತ್ತಾಗಲಿಲ್ಲ ಎಂದು ಆಕೆಯ ಪೋಷಕರು ಶಾಲಾ ಅಧಿಕಾರಿಗಳಿಂದ ತಿಳಿದುಕೊಳ್ಳಲು ಪ್ರಯತ್ನಿಸಿದರು. ರಜೆಯ ಸಮಯದಲ್ಲಿ ಮನೆಗೆ ಹೋದಾಗ ಬಾಲಕಿ ಗರ್ಭಿಣಿಯಾಗಿರುವ ಸಾಧ್ಯತೆಯಿದೆ ಎಂದು ಜಿಲ್ಲಾ ಕಲ್ಯಾಣ ಅಧಿಕಾರಿ ಶ್ರೀನಿವಾಸ್ ಆಚಾರ್ಯ ಹೇಳಿದ್ದಾರೆ. “ಇಲಾಖೆಯ ವಿಚಾರಣೆ ಈಗಾಗಲೇ ಪ್ರಾರಂಭವಾಗಿದೆ” ಎಂದು ಅವರು ಹೇಳಿದ್ದಾರೆ. ಆಕೆಯನ್ನು ಗರ್ಭಿಣಿಯನ್ನಾಗಿ ಮಾಡಿದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ.

## ಪ್ರಮುಖ ಸುದ್ದಿ

# ಮುಂದಿನ ಕುಂಭ ಮೇಳ ಎಲ್ಲಿ..ಯಾವಾಗ..ನಡೆಯಲಿದೆ? ಇಲ್ಲಿದೆ ವಿವರ

ಭಾರತ ಮಾತ್ರವಲ್ಲದೇ ವಿಶ್ವದಲ್ಲೇ ಅತಿ ದೊಡ್ಡ ಧಾರ್ಮಿಕ ಉತ್ಸವ ಎಂದರೆ ಅದು ಕುಂಭ ಮೇಳ. ಈ ಬಾರಿ ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ 144 ವರ್ಷಗಳಿಗೊಮ್ಮೆ ನಡೆಯುವ ಮಹಾ ಕುಂಭ ಮೇಳ ಅದ್ದೂರಿಯಾಗಿ ನಡೆದು ಸಂಪನ್ನಗೊಂಡಿದೆ. ಈ ವರ್ಷದ ಮಕರ ಸಂಕ್ರಾತಿಯ ಹಿಂದಿನ ದಿನ ಅಂದರೆ ಜನವರಿ 13ರಂದು ಆರಂಭವಾದ ಈ ಮಹಾ ಕುಂಭಮೇಳವು 45 ದಿನಗಳನ್ನು ಯಶಸ್ವಿಯಾಗಿ ಮುಗಿಸಿ, ಇಂದು ಮಹಾ ಶಿವರಾತ್ರಿಯ ದಿನ ಅಮೃತ ಸ್ನಾನದೊಂದಿಗೆ ಕೊನೆಗೊಳ್ಳಲಿದೆ.

ಪುಟ 2



### ಎಲ್ಲೆಲ್ಲಿ ಕುಂಭ ಮೇಳ ನಡೆಯುತ್ತದೆ?

ಉತ್ತರಾಖಂಡದ ಗಂಗಾ ನದಿಯ ದಡದಲ್ಲಿರುವ ಹರಿದ್ವಾರದಲ್ಲಿ ಪ್ರತಿ 12 ವರ್ಷಗಳಿಗೊಮ್ಮೆ ಮಹಾ ಕುಂಭಮೇಳವನ್ನು ನಡೆಸಲಾಗುತ್ತದೆ. ಅಲ್ಲದೇ ಕೆಲವೊಂದು ಬಾರಿ ಇದೇ ಪ್ರದೇಶದಲ್ಲಿ ಪ್ರತಿ ಆರು ವರ್ಷಗಳಿಗೊಮ್ಮೆ ಅರ್ಧ ಕುಂಭ ಮೇಳವನ್ನು ಸಹ ಆಯೋಜಿಲಾಗುತ್ತದೆ. ಮಹಾರಾಷ್ಟ್ರದ ಗೋದಾವರಿ ನದಿಯ ದಡದಲ್ಲಿರುವ ನಾಸಿಕ್‌ನಲ್ಲಿ ಹಾಗೂ ಮಧ್ಯಪ್ರದೇಶದ ಶಿಪ್ರಾ ನದಿಯ ದಡದಲ್ಲಿರುವ ಉಜ್ಜಯಿನಿಯಲ್ಲಿ ಕುಂಭಮೇಳ ನಡೆಯುತ್ತವೆ. ಹೀಗಾಗಿ ಮುಂದಿನ ಕುಂಭ ಮೇಳ ಎಲ್ಲಿ ಎನ್ನುವ ಪ್ರಶ್ನೆಗೆ ಈಗಾಗಲೇ ಉತ್ತರ ಸಿಕ್ಕಿದೆ. ಹೌದು ಮುಂದಿನ ಪೂರ್ಣ ಕುಂಭ ಮೇಳ ಮಹಾರಾಷ್ಟ್ರದ ನಾಸಿಕ್‌ನಲ್ಲಿ 2027ರಂದು ನಡೆಯಲಿದೆ. ಮುಂಬರುವ ಪೂರ್ಣ ಕುಂಭ ಮೇಳ ಗೋದಾವರಿ ನದಿ ತೀರದಲ್ಲಿ ನಡಯಲಿದೆ. ಇದನ್ನು ಸಿಂಹ ಹಸ್ತ ಕುಂಭಮೇಳ ಎಂದು ಸಹ ಕರೆಯಲಾಗುತ್ತದೆ. ಸುಮಾರು 17ನೇ ಶತಮಾನದಿಂದಲೂ ಕೂಡ ನಾಸಿಕ್‌ನಲ್ಲಿ ಈ ಕುಂಭ ಮೇಳವನ್ನು ನಡೆಸಿಕೊಂಡು ಬರಲಾಗುತ್ತಿದೆ.

ಫಾಸ್ಟ್ ನ್ಯೂಸ್

## ಮುಂದಿನ ಕುಂಭ ಮೇಳ ಎಲ್ಲಿ.. ಯಾವಾಗ.. ನಡೆಯಲಿದೆ? ಇಲ್ಲಿದೆ ವಿವರ

» ಮೊದಲ ಪುಟದಿಂದ

**ಇಂದುರಾತ್ರಿಯವರೆಗೆತ್ರಿವೇಣಿಸಂಗಮದಲ್ಲಿಪವಿತ್ರಸ್ನಾನ ಇರಲಿದೆ.:** ಈ ಬಾರಿಯ ಮಹಾ ಕುಂಭಮೇಳದಲ್ಲಿ 45 ಕೋಟಿ ಭಕ್ತರು ಭಾಗಿಯಾಗುವ ನಿರೀಕ್ಷೆ ಇತ್ತು. ಆದರೆ ಆಯೋಜಕರ ನಿರೀಕ್ಷೆಗೂ ಮೀರಿ ಭಕ್ತ ಸಾಗರ ಹರಿದು ಬಂದಿದ್ದು, ಭಾರತದ ಮೂಲೆ ಮೂಲೆಯಿಂದ ಮಾತ್ರವಲ್ಲದೇ ವಿದೇಶದಿಂದಲೂ ಭಕ್ತರು ಹಾಗೂ ಗಣ್ಯರು ಆಗಮಿಸಿದ್ದು ಸುಮಾರು ಅವರವತ್ತು ಕೋಟಿ ಭಕ್ತರು ಮಹಾ ಕುಂಭ ಮೇಳದಲ್ಲಿ ಪವಿತ್ರ ಸ್ನಾನ ಕೈಗೊಂಡಿದ್ದಾರೆ.

ಈ ಬಾರಿಯ ಮಹಾ ಕುಂಭ ಮೇಳ ಯಶಸ್ವಿಯಾದ ಬೆನ್ನಲ್ಲೇ ಮುಂದಿನ ಕುಂಭ ಮೇಳ ಎಲ್ಲಿ ಎನ್ನುವ ಪ್ರಶ್ನೆ ಈಗಾಗಲೇ ಉದ್ಭವಗೊಂಡಿದೆ. ಮುಂದಿನ ಕುಂಭ ಮೇಳ ಎಲ್ಲಿ ಎನ್ನುವ ಮೊದಲು ಕುಂಭ ಮೇಳದ ಬಗ್ಗೆ ಕೆಲವು ವಿಚಾರಗಳನ್ನು ಈ ಕೆಳಗೆ ನೀಡಲಾಗಿದೆ.

**ಕುಂಭ ಮೇಳದ ವಿಧಗಳೇನು?:** 700 ವರ್ಷಗಳ ಇತಿಹಾಸ ಇರುವ ಈ ಕುಂಭ ಮೇಳವನ್ನು ವರ್ಷಗಳಿಗೆ ಅನುಗುಣವಾಗಿ ವಿವಿಧ ಹೆಸರುಗಳಿಂದ ಕರೆಯಲಾಗುತ್ತದೆ. ಸಾಮಾನ್ಯವಾಗಿ ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿರುವ ಸರಸ್ವತಿ, ಗಂಗಾ ಹಾಗೂ ಯಮುನಾ ನದಿಗಳ ಸಂಗಮ ಕ್ಷೇತ್ರವಾದ ತ್ರಿವೇಣಿ ಸಂಗಮದಲ್ಲಿ ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಕುಂಭ ಮೇಳವನ್ನು ನಡೆಸಲಾಗುತ್ತದೆ. ಇನ್ನು ಆರು ವರ್ಷಗಳಿಗೊಮ್ಮೆ ಅರ್ಧ ಕುಂಭ ಮೇಳ ನಡೆಸಲಾಗುತ್ತದೆ. ಹಾಗೂ ಸಂಪೂರ್ಣ ಹನ್ನೆರಡು ವರ್ಷಗಳಿಗೊಮ್ಮೆ ಪೂರ್ಣ ಕುಂಭ ಮೇಳ ಎಂದು ಕರೆಯಲಾಗುತ್ತದೆ.

## ಕಾಂಗ್ರೆಸ್ ಜಿಲ್ಲಾಧ್ಯಕ್ಷರ ಬದಲಾವಣೆ ಫಿಕ್ಸ್, ಯಾರಿಗೆಲ್ಲ ಗೇಟ್‌ಪಾಸ್?

» ಮೊದಲ ಪುಟದಿಂದ

ಅಲ್ಲದೆ ರಾಜ್ಯಾದೆಲ್ಲೆಡೆ ಒಟ್ಟು 100 ಕಾಂಗ್ರೆಸ್ ಕಚೇರಿಗಳನ್ನು ಆರಂಭಿಸಲಾಗುತ್ತಿದ್ದು, ಮಾರ್ಚ್ ಎರಡನೇವಾರದಲ್ಲಿಎಐಸಿಸಿಅಧ್ಯಕ್ಷಮಲ್ಲಿಕಾರ್ಜುನ್ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರನ್ನು ನೂತನ ಕಚೇರಿಯ ಶಂಕುಸ್ಥಾಪನೆಗೆ ಆಹ್ವಾನಿಸುತ್ತಿದ್ದೇವೆ. 100 ಕಾಂಗ್ರೆಸ್ ಕಚೇರಿಗಳ ಶಂಕುಸ್ಥಾಪನೆಯನ್ನ ವರ್ಚುವಲ್ ಆಗಿ ನೆರವೇರಿಸಲಿದ್ದಾರೆ ಎಂದು ಹೇಳಿದ್ದರು.ಸಿದ್ದರಾಮಯ್ಯ ಅವರು, ನಾನೂ ಸೇರಿದಂತೆ ಕಾಂಗ್ರೆಸ್ ಪಕ್ಷದ ಎಲ್ಲ ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಗಳನ್ನು ನಡೆಸುತ್ತಿದ್ದೇವೆ. ಅದರಂತೆ ರಾಜ್ಯದ ಎಲ್ಲ ಕ್ಷೇತ್ರಗಳಲ್ಲೂ ಕಾರ್ಯಕರ್ತರ ಸಭೆ ನಡೆಯಬೇಕು. ಪಕ್ಷದ ಕಚೇರಿ ನಿರ್ಮಾಣಕ್ಕೆ ಶೀಘ್ರವೇ ಜಾಗ ಅಂತಿಮಗೊಳಿಸುತ್ತೇವೆ. ರಾಮನಗರದಲ್ಲಿ ನಾನೇ ಖುದ್ದಾಗಿ ಕಾಂಗ್ರೆಸ್ ಕಚೇರಿಗೆ ಒಂದು ಜಾಗ ಖರೀದಿಸಿ ಉಡುಗೊರೆಯಾಗಿ ನೀಡುತ್ತಿದ್ದೇನೆ ಎಂದು ಡಿಕೆ ಶಿವಕುಮಾರ್ ತಿಳಿಸಿದ್ದರು.ಅಲ್ಲದೆ ಪಕ್ಷದಲ್ಲಿ ಫೀಲ್ಡಿಗಿಳಿದು ಕೆಲಸ ಮಾಡುವವರಿಗೆ ಸ್ಥಾನ ನೀಡಲಾಗುವುದು. ಮಹಿಳೆಯರಿಗೂ ಪಕ್ಷದಲ್ಲಿ ಪ್ರಮುಖ ಸ್ಥಾನಗಳನ್ನು ನೀಡುವುದಾಗಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಇದೀಗ ರಾಜ್ಯದ ಎಲ್ಲ ಜಿಲ್ಲೆಗಳ ಕಾಂಗ್ರೆಸ್ ಅಧ್ಯಕ್ಷರ ಕಾರ್ಯವೈಖರಿ ಪರಿಶೀಲಿಸಿ, ಕೆಲವರಿಗೆ ಗೇಟ್‌ಪಾಸ್ ನೀಡಲಿದ್ದು, ನಿಷ್ಠಾವಂತ ಕಾರ್ಯಕರ್ತರಿಗೆ ಜಿಲ್ಲಾಧ್ಯಕ್ಷ ಸ್ಥಾನ ಸಿಗಲಿದೆ.

## ಮಾಜಿ ಸಿಎಂ ಹೊಸ ಇನ್ನಿಂಗ್ಸ್: ರಾಜ್ಯಸಭೆಗೆ ಅರವಿಂದ್ ಕೇಜ್ರಿವಾಲ್ ?

ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷ ಮತ್ತು ನವದೆಹಲಿ ಕ್ಷೇತ್ರದಲ್ಲಿ ಅರವಿಂದ್ ಕೇಜ್ರಿವಾಲ್ ಸೋತ ನಂತರ, ಅವರ ರಾಜಕೀಯ ಭವಿಷ್ಯದ ಬಗ್ಗೆ ಈಗ ಚರ್ಚೆಗಳು ನಡೆಯುತ್ತಿವೆ. ಕೇಜ್ರಿವಾಲ್ ಪಂಜಾಬ್‌ನಿಂದ ತಮ್ಮ ಹೊಸ ಇನ್ನಿಂಗ್ಸ್ ಆರಂಭಿಸಲಿದ್ದಾರೆ ಎಂದು ಹೇಳಲಾಗುತ್ತಿದೆ. ಅವರು ಪಂಜಾಬ್‌ನಿಂದ ರಾಜ್ಯಸಭೆಗೆ ಹೋಗಬಹುದು ಎಂದು ಹೇಳಲಾಗುತ್ತಿದೆ. ಆದರೆ, ಈ ಬಗ್ಗೆ ಇಲ್ಲಿಯವರೆಗೆ ಯಾವುದೇ ಅಧಿಕೃತ ಮಾಹಿತಿ ಬಂದಿಲ್ಲ. ದೆಹಲಿಯ ಮಾಜಿ ಸಿಎಂ ಕೇಜ್ರಿವಾಲ್ ರಾಜ್ಯಸಭೆಗೆ ಹೋಗಬಹುದು ಎಂಬ ವದಂತಿ ಹಬ್ಬಿದೆ. ಈ ಬಗ್ಗೆ ರಾಷ್ಟ್ರ ರಾಜಧಾನಿಯಲ್ಲಿ ಊಹಾಪೋಹಗಳು ಹರಡಿವೆ. ಪಂಜಾಬ್‌ನ ಲುಧಿಯಾನ ಪಶ್ಚಿಮ ಉಪಚುನಾವಣೆಗೆ ಆಮ್ ಆದ್ಮಿ ಪಕ್ಷವು ರಾಜ್ಯಸಭಾ ಸಂಸದ ಸಂಜೀವ್ ಅರೋರಾ ಅವರನ್ನು ಅಭ್ಯರ್ಥಿಯಾಗಿ ಅಂತಿಮಗೊಳಿಸಿದೆ. ಆಮ್ ಆದ್ಮಿ ಪಕ್ಷವು ಸಂಜೀವ್ ಅರೋರಾ ಅವರ ಹೆಸರನ್ನು ಘೋಷಿಸುವುದರೊಂದಿಗೆ, ಕೇಜ್ರಿವಾಲ್ ಮುಂದೆ ಏನು ಮಾಡುತ್ತಾರೆ ಎಂಬ ಬಗ್ಗೆ ರಾಜಕೀಯ ವಲಯಗಳಲ್ಲಿ ಚರ್ಚೆ ನಡೆಯುತ್ತಿದೆ. ಶಾಸಕ ಗುರುಪ್ರೀತ್ ಗೋಗಿ ಅವರ ಹಠಾತ್ ನಿಧನದ ನಂತರ ಲುಧಿಯಾನ ಪಶ್ಚಿಮ ವಿಧಾನಸಭಾ ಸ್ಥಾನ ತೆರವಾಗಿತ್ತು. ಸಂಜೀವ್ ಅರೋರಾ ಪಂಜಾಬ್‌ನಲ್ಲಿ ದೊಡ್ಡ ಉದ್ಯಮಿ ಮತ್ತು ಲುಧಿಯಾನದವರು. ಅವರು ಅರವಿಂದ್ ಕೇಜ್ರಿವಾಲ್ ಅವರಿಗೆ ತುಂಬಾ ಆಪ್ತರು ಎಂದು ಪರಿಗಣಿಸಲಾಗಿದೆ. ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಕೇಜ್ರಿವಾಲ್ ಪರ್ವೇಶ್ ವರ್ಮಾ ವಿರುದ್ಧ ಸೋತರು. ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ನಾಯಕನೊಬ್ಬರು ಸುಮ್ಮನಿರುವುದಿಲ್ಲ ಎಂದು ರಾಜಕೀಯ ಪಂಡಿತರು ಅಭಿಪ್ರಾಯಪಡುತ್ತಿದ್ದಾರೆ. ಈ ಪರಿಸ್ಥಿತಿಯಲ್ಲಿ ಕೇಜ್ರಿವಾಲ್ ರಾಜ್ಯಸಭೆಗೆ ಹೋಗುತ್ತಾರೆ.

# ಭಕ್ತಿಗೆ ಪರಮಾತ್ಮ ಒಲಿಯುತ್ತಾನೆ; ಅಭಿನವ ಶ್ರೀ

» ಚಿತ್ರದುರ್ಗ



ಪರಮಾತ್ಮನನ್ನು ಒಲಿಸಿಕೊಳ್ಳಲು ಯಾವುದೇ ರೀತಿಯ ಆಡಂಬರ ಬೇಡ, ಭಕ್ತಿಯಿಂದ ಆತನನ್ನು ಆರಾಧಿಸಿದರೆ ಸಾಕು ಆತ ನಿಮ್ಮ ಭಕ್ತಿಗೆ ಒಲಿಯುತ್ತಾನೆ, ನಿಮ್ಮ ಇಷ್ಟಾರ್ಥಗಳನ್ನು ನೇರವೇರಿಸುತ್ತಾನೆ ಎಂದು ಹುಬ್ಬಳ್ಳಿಯ ವಿಜಯಪುರದ ಶ್ರೀ ಷಣ್ಮುಖಾರೂಢ ಮಠದ ಶಾಂತಾಶ್ರಮದ ಶ್ರೀ ಅಭಿನವ ಸಿದ್ದಾರೂಢ ಶ್ರೀಗಳು ತಿಳಿಸಿದರು.

ಚಿತ್ರದುರ್ಗ ನಗರದ ಕಬೀರಾನಂದ ನಗರದಲ್ಲಿನ ಶ್ರೀ ಕಬೀರಾನಂದಾಶ್ರಮದವತಿಯಿಂದ ನಡೆಯುತ್ತಿರುವ 95ನೇ ಮಹಾ ಶಿವರಾತ್ರಿ ಮಹೋತ್ಸವದ ನಾಲ್ಕನೇ ದಿನದ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಭಕ್ತಿಯಿಂದ ಭಗವಂತನಾಮಸ್ಮರಣೆಯನ್ನುಮಾಡಿದಾಗ ಆತಒಲಿಯುತ್ತಾನೆ,ಮನಸ್ಸಿನಲ್ಲಿಆಸೆಯನ್ನು ಇಟ್ಟುಕೊಂಡು ಅದನ್ನು ಈಡೇರಿಸುವಂತೆ ಭಗವಂತನ್ನು ಒತ್ತಾಯಿಸಿ ಪೂಜೆಯನ್ನು ಮಾಡಲಾಗುತ್ತದೆ. ಈ ಜನ್ಮದಲ್ಲಿ ಪುಣ್ಯವನ್ನು ಗಳಿಸಿದಾಗ ಮಾತ್ರ ಸ್ವರ್ಗದಲ್ಲಿ ಜಾಗ ಸಿಗಲು ಸಾಧ್ಯವಿದೆ. ಸ್ವರ್ಗವೂ ಸಹಾ ಕ್ಷಣಿಕ ಅಲ್ಲಿಯ ಜಾಗ ಇಲ್ಲದಿದ್ದಾಗ ಮತ್ತೇ ಭೂಲೋಕಕ್ಕೆ ಬರಲೇ ಬೇಕಿದೆ. ಮೋಕ್ಷವನ್ನು ಪಡೆಯಲು ಭಕ್ತಿಯೊಂದೇ ಮಾರ್ಗವಾಗಿದೆ ಎಂದರು.

ಹೆಬ್ಬಾಳ್‌ನ ವಿರಕ್ತ ಮಠದ ಶ್ರೀ ಮಹಾಂತ ರುದ್ರೇಶ್ವರ ಶ್ರೀಗಳು ಮಾತನಾಡಿ, ನಮ್ಮ ಮಠ ಹಾಗೂ ಕಭೀರಾನಂದ ಆಶ್ರಮ ಹಿಂದುಳಿದ ವರ್ಗಗಳ ಮಠವಾಗಿವೆ, ಇವುಗಳು ಸಮಾಜದ ಪರವಾಗಿ ಚಿಂತನೆಯನ್ನು ನಡೆಸುತ್ತವೆ, ಭಕ್ತಿಯಿಂದ ಮುಕ್ತಿಯನ್ನು ಕರುಣಿಸುತ್ತದೆ. ಇವುಗಳು ಸನಾತನ ಧರ್ಮವನ್ನು ಉಳಿಸುವ ಮಠಗಳಾಗಿವೆ. ಇಂದಿನ ದಿನಮಾನದಲ್ಲಿ ಸಮಾಜ ಅಧೋಗತಿಗೆ ಹೋಗುತ್ತಿದೆ ಯುವ ಜನಾಂಗ ದಾರಿ ತಪ್ಪುತ್ತಿದೆ, ಉತ್ತಮ ಸಮಾಜ ನಿರ್ಮಾಣಕ್ಕೆ ದಾರಿ ತಪ್ಪುತ್ತಿರುವ ಯುವ ಜನಾಂಗವನ್ನು ಸರಿದಾರಿಗೆ ತರಲು ಗುರುಗಳ ಅವಶ್ಯಕತೆ ಇದೆ. ನಮ್ಮಲ್ಲಿ ಕಾಯಕ ಪ್ರಜ್ಞೆ ಹೆಚ್ಚಾಗಬೇಕಿದೆ ಎಲ್ಲರು ಸಹಾ ಕಾಯಕ ಮಾಡಿದೇ ಪ್ರಸಾದವನ್ನು ಸ್ವೀಕಾರ ಮಾಡಬೇಕೆಂಬ ಛಲ ಬರಬೇಕಿದೆ ಮಾನವನಲ್ಲಿ ಇರುವಂತ ದುಶ್ಚಟಗಳು, ದುರುದ್ದೇಶಗಳು ದೂರವಾಗಬೇಕಿದೆ. ಆಗ ಮಾತ್ರ ಉತ್ತಮ ಸಮ ಸಮಾಜ ನಿರ್ಮಾಣವಾಗಲು ಸಾಧ್ಯವಿದೆ ಎಂದರು.

ಹೊಸದುರ್ಗದ ಶೀಲಾಪುರಿ ಉಪ್ಪಾರ ಭಗೀರಥ ಮಹಾ ಸಂಸ್ಥಾನದ ಶ್ರೀ ಪುರುಷೋತ್ತಮಾನಂದ ಶ್ರೀಗಳು ಮಾತನಾಡಿ,ನಿರ್ಮಲವಾದನಿಷ್ಕಲ್ಮಶವಾದ ಭಕ್ತಿಯಿಂದ ಮುಕ್ತಿಯನ್ನು ಹೊಂದಲು ಸಾಧ್ಯವಿದೆ. ಶಿವರಾತ್ರಿಯನ್ನು ಈ ಒಂದು ದಿನ ಮಾತ್ರ ಆಚರಣೆ ಮಾಡದೇ ಪ್ರತಿ ದಿನವೂ ಸಹಾ ಶಿವನ ನಾಮಸ್ಮರಣೆಯನ್ನು ಮಾಡುವುದರ ಮೂಲಕ ಶಿವನ ಕೃಪೆಗೆ ಪಾತ್ರರಾಗಬೇಕಿದೆ. ಮಾನವ ಜೀವ ಇರುವವರೆಗೂ ಶಿವನಾಗಿರುತ್ತಾನೆ ಜೀವ ಹೋದ ಮೇಲೆ ಶವನಾಗುತ್ತಾನೆ, ಜೀವ ಇದ್ದಾಗಲೇ ಉತ್ತಮವಾದ ಸಮಾಜ ಮುಖಿಯಾದ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಸನ್ಮಾರ್ಗವನ್ನು ಕಂಡುಕೊಳ್ಳಬಹುದಾಗಿದೆ ಎಂದರು.

ಮಾಜಿ ಸಚಿವ ಹೆಚ್.ಅಂಜನೇಯ ಮಾತನಾಡಿ, ಕಳೆದ 35 ವರ್ಷಗಳ ಹಿಂದೆ ಈ ಪ್ರದೇಶ ಕಾಡಾಗಿತ್ತು ಆಗ ಇಲ್ಲಿಗೆ ಬಂದ ಶಿವಲಿಂಗಾನಂದ ಶ್ರೀಗಳು ಕೃಪಾ ದೃಷ್ಟಿಯಿಂದ ಈ ಪ್ರದೇಶ ಈಗ ನಾಡಾಗಿ ಉಪಯೋಗಕ್ಕೆ ಬರುವಂತ ಸ್ಥಳವಾಗಿದೆ. ಚಿತ್ರದುರ್ಗದಲ್ಲಿ ಜಾತಿಗೊಂದು ಮಠಗಳು ಇವೆ, ಅದಕ್ಕೆ ಅವರದ್ದೇ ಆದ ಭಕ್ತರಿದ್ದಾರೆ. ಆದರೆ ಕಬೀರಾನಂದಾಶ್ರಮ ಮಾತ್ರ ಯಾವುದೇ ಜಾತಿ, ಧರ್ಮ ಇಲ್ಲ ಇಲ್ಲಿ ಎಲ್ಲಾ ಜನಾಂಗ, ಜಾತಿ, ಧರ್ಮವರು ಸಹಾ ಬರುತ್ತಾರೆ ಶ್ರೀಗಳು ಎಲ್ಲರಿಗೂ ಸಹಾ ದರ್ಶನಾರ್ಶಿವಾದವನ್ನು ನೀಡುತ್ತಾರೆ. ಈ ಆಶ್ರಮ ಬಸವಣ್ಣ ರವರ ಅನುಭವ ಮಂಟಪದ ರೀತಿಯಲ್ಲಿ ಇದೆ. ಶ್ರೀಗಳು ಅನಾಥ ಮಕ್ಕಳನ್ನು ಪೋಷಣೆ ಮಾಡುತ್ತಿದ್ದಾರೆ ಅವರಿಗೆ ಶಿಕ್ಷಣವನ್ನು ನೀಡುತ್ತಿದ್ದಾರೆ, ವೃದ್ಧಾಶ್ರಮವನ್ನು ನಡೆಸುವುದರ ಮೂಲಕ ಕೊನೆಯ ಸಮಯದಲ್ಲಿ ನಿಶ್ಚಿಂತ ಜೀವನ ನಡೆಸಲು ಸಹಕಾರಿಯಾಗಿದ್ದಾರೆ. ಗೋವುಗಳನ್ನು ಸಾಕುವುದರಮೂಲಕಗೋರಕ್ಷಕರಾಗಿದ್ದಾರೆ ಎಂದರು.

ಶಿವಲಿಂಗಾನಂಧ ಶ್ರೀಗಳು, ಹಾಗೂ ಬಾಗಲಕೋಟೆಯ ಕೌದಿಶ್ವರ ಮಹಾ ಸಂಸ್ಥಾನದ ಶ್ರೀ ಮಾಧವಾನಂದ ಶ್ರೀಗಳು ಸಾನಿಧ್ಯವಹಿಸಿದ್ದರು. ಕಾರ್ಯಕ್ರಮದಲ್ಲಿ 95ನೇ ಮಹಾ ಶಿವರಾತ್ರಿ ಮಹೋತ್ಸವ ಸಮಿತಿ ಅಧ್ಯಕ್ಷರಾದ ವಿಜಯಕುಮಾರ್, ಗ್ಯಾರೆಂಟಿ ಯೋಜನೆಯ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷರಾದ ಶಿವಣ್ಣ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ತಾಜ್‌ಪೀರ್, ಚಿತ್ರದುರ್ಗ ತಾ.ಪಂ. ಇಓ ರವಿಕುಮಾರ್, ಸೇರಿದಂತೆ ಇತರರು ಭಾಗವಹಿಸಿದ್ದರು.

ಸುಬ್ರಾಯ ತಿಮ್ಮಣ್ಣ ಭಟ್ಟರು ವೇದ ಘೋಷಗಳನ್ನು ಮಾಡಿದರೆ ಅಭೀಷೇಕ ಮುರುಡ ಪ್ರಾರ್ಥಿಸಿದರೆ, ವಿ.ಎಲ್.ಪ್ರಶಾಂತ್ ಸ್ವಾಗತಿಸಿದರು, ನವೀನ್ ಮಸ್ಕಲ್ ಕಾರ್ಯಕ್ರಮ ನಿರೂಪಿಸಿದರು. ಶ್ರೀ ಸದ್ಗುರು ಕಬೀರಾನಂದದಸ್ವಾಮಿ ವಿದ್ಯಾಪೀಠದ ನರ್ಸಿಂಗ್ ಮತ್ತು ಪ್ಯಾರ ಮೆಡುಕಲ್ ಬಿ.ಇಡಿ ಪದವಿ ಪೂರ್ವ ಕಾಲೇಜುಗಳವಿದ್ಯಾರ್ಥಿಗಳಿಂದಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು, ಮಯೂರಿ ಬಸವರಾಜ್ ರವರಿಂದ ಭರತನಾಟ್ಯ ಕುಚುಪುಡಿ, ಸಂದೀಪ್‌ರವರಿಂದ ಜಾದು ಕಾರ್ಯಕ್ರಮ ನಡೆಸಿಕೊಟ್ಟರು.

# 1 ಕೋಟಿ ರೂ.ವೆಚ್ಚದಲ್ಲಿ ನೂತನ ಚೆಕ್‌ಡ್ಯಾಂ

» ಹೊಳಲ್ಕೆರೆ



ಕೊನೆ ಕ್ಷಣ ಒಂದು ಗಂಟೆ ಅಧಿಕಾರವಿರುವವರೆಗೂ ಕ್ಷೇತ್ರದ ಜನರ ಸೇವೆ ಮಾಡುತ್ತೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ತಾಲ್ಲೂಕಿನ ಸಿಂಗೇನಹಳ್ಳಿ ಗ್ರಾಮದ ಹತ್ತಿರ ಹರಿಯುವ ಹಳ್ಳಕ್ಕೆ ಒಂದು ಕೋಟಿ ರೂ. ವೆಚ್ಚದಲ್ಲಿ ನೂತನ ಚೆಕ್‌ಡ್ಯಾಂ ನಿರ್ಮಾಣ ಕಾಮಗಾರಿಗೆ ಬುಧವಾರ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು.

ರೈತರಿಗೆ ನೀರು, ವಿದ್ಯುತ್, ಮೂಲ ಸೌಕರ್ಯ ಕಲ್ಪಿಸುವುದು ಜನಪ್ರತಿನಿಧಿಯ ಕರ್ತವ್ಯ. ಚಿಕ್ಕಜಾಜೂರಿನ ಕೋಟೆಹಾಳ್ ಸಮೀಪ ಐದು ನೂರು ಕೋಟಿ ರೂ.ವೆಚ್ಚದಲ್ಲಿ ವಿದ್ಯುತ್ ಪವರ್ ಸ್ಟೇಷನ್ ನಿರ್ಮಾಣ ಮಾಡುತ್ತಿದ್ದೇನೆ. ಜಿಲ್ಲೆಯಲ್ಲಿಯೇ ಇಂತಹ ದೊಡ್ಡ ಪವರ್ ಸ್ಟೇಷನ್ ಇಲ್ಲ. ವಿಧಾನಸಭೆ ಅಧಿವೇಶನದಲ್ಲಿ ಗಲಾಟೆ ಮಾಡಿದ್ದರಿಂದ ರಾಜ್ಯ ಸರ್ಕಾರ ಆ.15 ರೊಳಗೆ ಎಲ್ಲಾ ಕೆರೆಗಳಿಗೆ ನೀರು ತುಂಬಿಸುವ ಭರವಸೆ ನೀಡಿದೆ. ಹಿರಿಯೂರಿನ ವಾಣಿವಿಲಾಸಸಾಗರದಿಂದ ನೀರು ತಂದು ತಾಲ್ಲೂಕಿನಾದ್ಯಂತ ಪ್ರತಿ ಮನೆ ಮನೆಗೆ ಶುದ್ದ ಕುಡಿಯುವ ನೀರು ಪೂರೈಸುವುದಕ್ಕಾಗಿ 367 ಕೋಟಿ ರೂ.ಗಳನ್ನು ಖರ್ಚು ಮಾಡುತ್ತಿದ್ದೇನೆ. ಭದ್ರಾ ಪ್ರಾಜೆಕ್ಟ್ ಹಾಗೂ ಎತ್ತಿನಹೊಳೆಯಿಂದ ವಿ.ವಿ.ಸಾಗರಕ್ಕೆ ನೀರು ಹರಿಯುವುದರಿಂದ ಎಂದಿಗೂ ನೀರಿನ ಸಮಸ್ಯೆಯಾಗುವುದಿಲ್ಲ ಎಂದು ತಿಳಿಸಿದರು.

ಮೂವತ್ತು ವರ್ಷಗಳ ಕೆಳಗೆ ತುಪ್ಪದಹಳ್ಳಿಯಲ್ಲಿ ಕೆರೆ ಹೊಡೆದಿದೆ ಎಂದು ಹೇಳಿದಾಗ ರಿಪೇರಿಗೆ ಮೂರು ಕೋಟಿ ರೂ.ಗಳನ್ನು ಕೊಟ್ಟಿದ್ದೇನೆ. ದೇವರ ಹೊಸಹಳ್ಳಿಯಲ್ಲಿ ನೀರು ಹರಿದು ಹೋಗುವುದನ್ನು ತಡೆಯುವುದಕ್ಕಾಗಿ ಬ್ರಿಡ್ಜ್ ಕಂ ಬ್ಯಾರೇಜ್ ಕಟ್ಟಿಸಿದ್ದೇನೆ. ರಾಜ್ಯದಲ್ಲಿ ಸರ್ಕಾರ ಯಾವುದಿದೆ ಎನ್ನುವುದು ಮುಖ್ಯವಲ್ಲ. ಅನುದಾನ ತಂದು ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದೇನೆ. ಯಾರಿಂದ ಏನನ್ನು ಹೇಳಿಸಿಕೊಂಡಿಲ್ಲ. ಎಲ್ಲೆಲ್ಲಿ ಏನು ಕೆಲಸಗಳಾಗಬೇಕೆಂಬುದನ್ನು ಅರ್ಥಮಾಡಿಕೊಂಡು ಕ್ಷೇತ್ರದ ಅಭಿವೃದ್ದಿಗೆ ಹಗಲು–ರಾತ್ರಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆಂದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಮಹೇಶ್ವರಪ್ಪ, ಡಿ.ಬಿ.ಕುಮಾರಣ್ಣ, ಶಿವಕುಮಾರ್, ರಾಜಣ್ಣ, ನುಲೇನೂರು ಶೇಖರ್, ಜಗದೀಶ್, ಬಸಪ್ಪ, ರಮೇಶ್, ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್‌ಗಳಾದ ನಾಗರಾಜ್, ಶರಣಪ್ಪ ಹಾಗೂ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಪಾರ್ಶ್ವನಾಥ್ ಶಾಲೆಯಿಂದ ಮಕ್ಕಳ ಹಬ್ಬ ಆಯೋಜನೆ




» ಚಿತ್ರದುರ್ಗ

ನಗರದ ಪಾರ್ಶ್ವನಾಥ್ ವಿದ್ಯಾ ಸಂಸ್ಥೆಯವತಿಯಿಂದ ನಡೆಯುತ್ತಿರುವ ಎಲ್.ಕೆ.ಜಿ.ಮತ್ತು ಯು.ಕೆ.ಜಿ.ಯ ಮಕ್ಕಳ ಹಬ್ಬವನ್ನು ನಗರದ ರೂಪವಾಣಿ ರಸ್ತೆಯಲ್ಲಿನ ಪಾರ್ಶ್ವನಾಥ ಭವನದಲ್ಲಿ ನಿನ್ನೆ ಸಂಜೆ ನಡೆಸಲಾಯಿತು.

ಸಮಾರಂಭದಲ್ಲಿ ಭಾಗವಹಿಸಿದ್ದ ಪಾರ್ಶ್ವನಾಥ್ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಬಾಬುಲಾಲ್‌ಜೈನ್ ಮಾತನಾಡಿ ನಮ್ಮ ಶಾಲೆಯಲ್ಲಿ 575 ಮಕ್ಕಳು ವಿದ್ಯಾಭ್ಯಾಸವನ್ನು ಮಾಡುತ್ತಿದ್ದು ಇವರಿಗೆ ಪಠ್ಯದ ಜೊತೆಗೆ ಕ್ರೀಡೆ, ಸಂಸ್ಕೃತಿಕ ಚಟುವಟಿಕೆಗಳನ್ನು ಸಹಾ ಕಲಿಸಲಾಗುತ್ತಿದೆ. ಇದರೊಂದಿಗೆ ಸಾಮಾಜಿಕ ಅರಿವನ್ನು ಸಹಾ ಮೂಡಿಸಲಾಗುತ್ತಿದೆ. ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು ಈ ಹಿನ್ನಲೆಯಲ್ಲಿ ಮಕ್ಕಳಿಗೆ ಉತ್ತಮವಾದ ಸಂಸ್ಕಾರವನ್ನು ಶಾಲೆಯಲ್ಲಿ ಕಲಿಸಲಾಗುತ್ತಿದೆ, ನಮ್ಮ ರಾಷ್ಟ್ರೀಯ ದಿನಾಚರಣೆಗಳನ್ನು ಹಾಗೂ ಹಬ್ಬಗಳನ್ನು ಸಹಾ ಮಕ್ಕಳಿಂದಲೇ ಮಾಡಿಸಿ ಅದರ ಅರ್ಥವನ್ನು ತಿಳಿಸಲಾಗುತ್ತದೆ.ಈ ವರೆಗೂ ಹಿಂದಿಯಲ್ಲಿ ಭೋಧನೆ ಇದ್ದ ಶಾಲೆಯನ್ನು ಈಗ ಆಂಗ್ಲ ಭಾಷಾ ಶಾಲೆಯನ್ನಾಗಿ ಪರಿವರ್ತನೆ ಮಾಡಲಾಗಿದೆ ಎಂದರು.

ಪಾರ್ಶ್ವನಾಥ್ ವಿದ್ಯಾಸಂಸ್ಥೆಯ ನಿರ್ದೇಶಕರಾದ ಜವೇರಿಲಾಲ್‌ರವರು ಶಾಲಾ ಅಭೀವೃದ್ದಿಯ ಬಗ್ಗೆ ಪೋಷಕರಿಗೆ ಮಾಹಿತಿಯನ್ನು ನೀಡಿದರು.ಇದೇ ಸಂದರ್ಭದಲ್ಲಿ ಎಲ್.ಕೆ.ಜಿ.ಹಾಗೂ ಯು.ಕೆ.ಜಿಯಲ್ಲಿ ಉತ್ತಮವಾದ ಅಂಕಗಳನ್ನು ಪಡೆದ ಮಕ್ಕಳನ್ನು ಗೌರವಿಸಲಾಯಿತು, ನಂತರ ಮಕ್ಕಳಿಂದ ವಿವಿಧ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರದರ್ಶನ ಮಾಡುವುದರ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶನ ಮಾಡಿದರು. ಈ ಸಂದರ್ಭದಲ್ಲಿ ಪಾರ್ಶ್ವನಾಥ್ ವಿದ್ಯಾ ಸಂಸ್ಥೆಯ ಸಲಹಾ ಸಮಿತಿಯ ಸದಸ್ಯರಾದ ಪುಕರಾಜ್ ಜೈನ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಸಲಹಾ ಸಮಿತಿ ಸದಸ್ಯರಾದ ಗೀಸುಲಾಲ್,ಉಪಾಧ್ಯಕ್ಷರಾದ ಉತ್ತಮಚಂದ್‌ಸುರಾನ, ಕಾರ್ಯದರ್ಶಿ ಸುರೇಶ್‌ಕುಮಾರ್, ನಿರ್ದೇಶಕರಾದ ವಿಫುಲ್ ಜೈನ್, ಮಹಾವೀರ್ ಜೈನ್, ಆಶಿಷಿ ಕುಮಾರ್, ಉದ್ಯಮಿ ರಾಜೇಶ್‌ಜೈನ್, ಶಾಲಾಮುಖ್ಯೋಪಾಧ್ಯಯರಾದ ನಾಜಿಮ್ ಭಾಗವಹಿಸಿದ್ದರು.


# ರೋಹಿತ್ ಶರ್ಮಾ 13 ರನ್ ಬಾರಿಸಿದರೆ ಗೇಲ್ ದಾಖಲೆ ಉಡೀಸ್

ಪಾಕಿಸ್ತಾನ ಆಯೋಜಿತ ಚಾಂಪಿಯನ್ಸ್ ಟ್ರೋಫಿ ರೋಚಕ ಘಟ್ಟದ ಮುಖ ಮಾಡಿದೆ. ಈ ಟೂರ್ನಿಯಲ್ಲಿ ಟೀಮ್ ಇಂಡಿಯಾ ಸಹ ಭಾಗವಹಿಸಿದ್ದು, ಆಡಿದ ಎರಡೂ ಪಂದ್ಯಗಳಲ್ಲೂ ಜಯ ಸಾಧಿಸಿವೆ. ಈಗ ಲೀಗ್ ಹಂತದ ಮೂರನೇ ಪಂದ್ಯ ನ್ಯೂಜಿಲೆಂಡ್ ವಿರುದ್ಧ ಮಾರ್ಚ್ 2 ರಂದು ನಡೆಯಲಿದೆ. ಈ ಪಂದ್ಯದಲ್ಲಿ ಟೀಮ್ ಇಂಡಿಯಾದ ಸ್ಟಾರ್ ಬ್ಯಾಟರ್ ರೋಹಿತ್ ಶರ್ಮಾ ಅವರ ಮೇಲೆ ಎಲ್ಲರ ಕಣ್ಣು ನೆಟ್ಟಿರಲಿವೆ.ಈ ಪಂದ್ಯದಲ್ಲಿ ಇವರು ಕ್ರಿಸ್ ಗೇಲ್ ದಾಖಲೆಯ ಮೇಲೆ ಕಣ್ಣು ನೆಟ್ಟಿದ್ದಾರೆ.

ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಸದ್ಯ ಸ್ಥಿರ ಪ್ರದರ್ಶನ ನೀಡುತ್ತಿದ್ದಾರೆ. ಚಾಂಪಿಯನ್ಸ್ ಟ್ರೋಫಿಯಲ್ಲಿ ಇವರು ಬಿಗ್ ಇನಿಂಗ್ಸ್ ಆಡದೇ ಇದ್ದರೂ ತಮ್ಮ ನೈಜ್ಯ ಆಟವನ್ನು ಆಡುತ್ತಿದ್ದಾರೆ. ಆಡಿದ ಎರಡೂ ಪಂದ್ಯಗಳಲ್ಲಿ ತಂಡಕ್ಕೆ ಉತ್ತಮ ಅಡಿಪಾಯ ಹಾಕಿಕೊಡುವಲ್ಲಿ ಇವರು ಶ್ರಮಿಸಿದ್ದಾರೆ. ಈಗ ನ್ಯೂಜಿಲೆಂಡ್ ವಿರುದ್ಧವೂ ಇದೇ ಕೆಲಸವ ಮಾಡುವ ವಿಶ್ವಾಸದಲ್ಲಿದ್ದಾರೆ. ಈ ಪಂದ್ಯದಲ್ಲಿ ಇವರು 13 ರನ್ ಬಾರಿಸಿದರೆ ವಿಶಿಷ್ಠ ದಾಖಲೆಯನ್ನು ನಿರ್ಮಿಸಲಿದ್ದಾರೆ.ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಇವರು ಅತಿ ಹೆಚ್ಚು ರನ್ ಬಾರಿಸಿದ ಲೆಕ್ಕಾಚಾರದಲ್ಲಿ ಕ್ರಿಸ್ ಗೇಲ್ ಅವರ ದಾಖಲೆಯನ್ನು ಅಳಿಸಿ ಹಾಕಬಹುದು. ರೋಹಿತ್ ಶರ್ಮಾ ಒಟ್ಟಾರೆ 496 ಅಂತಾರಾಷ್ಟ್ರೀಯ ಪಂದ್ಯಗಳಲ್ಲಿ 19581 ರನ್ ಸಿಡಿಸಿದ್ದಾರೆ.


ಪ್ರಮುಖ ಸುದ್ದಿ


# ನಗರದ ವಿವಿದೆಡೆ ಶಿವರಾತ್ರಿ ಪ್ರಯುಕ್ತ ವಿಶೇಷ ಪೂಜೆ


ಬೇಡರಕಣ್ಣಪ್ಪ


ಗಾರೆ ಈಶ್ವರ


ಪಾತಾಳೇಶ್ವರ


ನೀಲಕಂಠೇಶ್ವರಸ್ವಾಮಿ


ಉಚ್ಚಂಗಿಯಲ್ಲಮ್ಮ

» ಚಿತ್ರದುರ್ಗ

ಮಹಾ ಶಿವರಾತ್ರಿ ಹಬ್ಬದ ಪ್ರಯುಕ್ತ ನಗರದ ಬಹುತೇಕ ದೇವಾಲಯಗಳಲ್ಲಿ ಬುಧವಾರ ವಿಶೇಷವಾಗಿ ಅಲಂಕರಿಸಿ ಪೂಜಿಸಲಾಯಿತು.

ಕೆಳಗೋಟೆಯಲ್ಲಿರುವ ಬೇಡರ ಕಣ್ಣಪ್ಪ ದೇವಸ್ಥಾನದಲ್ಲಿ ಶಿವನಿಗೆ ಪ್ರಿಯವಾದ ಬಿಲ್ವಪತ್ರೆ ಹಾಗೂ ಹೂವುಗಳಿಂದ ಅಲಂಕರಿಸಿ ಪೂಜಿಸಲಾಯಿತು.

ಕೋಟೆ ರಸ್ತೆ, ಆನೆ ಬಾಗಿಲು ಸಮೀಪವಿರುವ ಪಾತಾಳೇಶ್ವರ ದೇವಾಲಯದಲ್ಲಿ ಶಿವನನ್ನು ಸಿಂಗರಿಸಿ ಬೆಳಗಿನಿಂದ ರಾತ್ರಿಯಿಡಿ ಭಕ್ತಿಯಿಂದ ಪೂಜೆ ಸಲ್ಲಿಸಲಾಯಿತು.ಗಾರೆ ಬಾಗಿಲು ಈಶ್ವರ ದೇವಸ್ಥಾನ, ಉಚ್ಚಂಗಿಯಲ್ಲಮ್ಮ, ಹೊಳಲ್ಕೆರೆ ರಸ್ತೆಯಲ್ಲಿರುವ ನೀಲಕಂಠೇಶ್ವರ ದೇವಸ್ಥಾನದಲ್ಲಿ ವರ್ಣರಂಜಿತವಾಗಿ ಅಲಂಕರಿಸಿ ಪೂಜಿಸಲಾಯಿತು. ನೆತ್ತಿ ಸುಡುವ ಬಿಸಿಲನ್ನು ಲೆಕ್ಕಿಸದೆ ಗಾಯತ್ರಿ ಭವನ್ ಸರ್ಕಲ್‌ನಿಂದ ಹಿಡಿದು ದೇವಸ್ಥಾನದವರೆಗೆ ಸಹಸ್ರಾರು ಭಕ್ತರು ಸರದಿ ಸಾಲಿನಲ್ಲಿ ನಿಂತು ನೀಲಕಂಠೇಶ್ವರ ಸ್ವಾಮಿಯ ದರ್ಶನ ಪಡೆದರು.

ಸಂಜೆ ಏಳು ಗಂಟೆಯಿಂದ ಎಲ್ಲಾ ದೇವಸ್ಥಾನಗಳಲ್ಲಿಯೂ ಭಕ್ತರು ತುಂಬಿ ತುಳುಕಾಡುತ್ತಿದ್ದು, ಶಿವನಿಗೆ ಭಕ್ತಿ ಸಮರ್ಪಿಸಿದರು. ಕೆಲವು ದೇವಾಲಯಗಳಲ್ಲಿ ಭಜನೆ ಏರ್ಪಡಿಸಲಾಗಿತ್ತು. ಅಲ್ಲಲ್ಲಿ ದೇವಸ್ಥಾನಗಳಲ್ಲಿ ಭಕ್ತರಿಗೆ ಪ್ರಸಾದ ವಿನಿಯೋಗಿಸಲಾಯಿತು.

ಗಾಂಧಿ ವೃತ್ತದ ನಾಲ್ಕು ಕಡೆ ಹೂವು ಹಣ್ಣುಗಳ ವ್ಯಾಪಾರದಿಂದ ಸಂಚಾರ ದಟ್ಟಣೆಯಿಂದ ಕೂಡಿ ವಾಹನಗಳು ಹಾಗೂ ಪಾದಚಾರಿಗಳ ಓಡಾಟಕ್ಕೆ ಕಷ್ಟವಾಗಿತ್ತು,ಸಂತೆಹೊಂಡದ ರಸ್ತೆ ಒಂದು ಬದಿಯಲ್ಲಿ ಹಣ್ಣು, ಹೂವು. ಕಬ್ಬು ಮಾರಾಟ ಹಾಗೂ ಮತ್ತೊಂದು ಬದಿಯಲ್ಲಿ ತರಕಾರಿ ಮಾರುಕಟ್ಟೆಯಿರುವುದರಿಂದ ದ್ವಿಚಕ್ರ ವಾಹನ ಸವಾರರು ಕಸರತ್ತು ಮಾಡುವಂತಾಗಿತ್ತು. ಮೊದಲೆ ಕಿಷ್ಕಿಂದೆಯಾಗಿರುವ ಈ ರಸ್ತೆಯಲ್ಲಿ ಬಸ್, ಆಟೋ, ಪಾದಚಾರಿಗಳು ಸಂಚರಿಸಬೇಕಾಗಿರುವುದರಿಂದ ಸಂಚಾರಿ ಪೊಲೀಸರು ಟ್ರಾಫಿಕ್ ಕಂಟ್ರೋಲ್ ಮಾಡುವಲ್ಲಿ ಹೈರಾಣಾಗಿದ್ದರು.

## ಫಾಸ್ಟ್ ನ್ಯೂಸ್

### ಮೈಸೂರು ಡಿಸಿಯಾಗಿ ಕುಮಾರ್ ನಾಯಕ್ ಲೋಪ: ರಾಜೀನಾಮೆಗೆ ವಿಪಕ್ಷ ಪಟ್ಟು

» **ಬೆಂಗಳೂರು**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಹಗರಣ ಸಂಬಂಧ ತನಿಖೆ ಪೂರ್ಣಗೊಳಿಸಿದ ಲೋಕಾಯುಕ್ತ ಪೊಲೀಸರು ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಕ್ಲೀನ್‌ಚಿಟ್ ನೀಡಿದ ಬೆನ್ನಲ್ಲೇ ಅಂದು ಮೈಸೂರು ಜಿಲ್ಲಾಧಿಕಾರಿಯಾಗಿದ್ದ ಹಾಲಿ ರಾಯಚೂರು ಕ್ಷೇತ್ರದ ಕಾಂಗ್ರೆಸ್ ಸಂಸದ ಕುಮಾರ್ ನಾಯಕ್ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮುಡಾ ಹಗರಣದಲ್ಲಿ ಅಧಿಕಾರಿಗಳದ್ದೇ ಲೋಪ ಎಂದು ಲೋಕಾಯುಕ್ತ ಪೊಲೀಸರು ವರದಿಯಲ್ಲಿ ಉಲ್ಲೇಖಿಸಿರುವ ಹಿನ್ನೆಲೆಯಲ್ಲಿ ಅಂದಿನ ಮೈಸೂರು ಜಿಲ್ಲಾಧಿಕಾರಿ ಕುಮಾರ ನಾಯಕ್ ರಾಜೀನಾಮೆ ಕೊಡಬೇಕು ಎಂಬ ಕೂಗು ಬಿಜೆಪಿ ಹಾಗೂ ಜೆಡಿಎಸ್ ಪಾಳಯದಲ್ಲಿ ಜೋರಾಗಿವೆ. ವಿಪಕ್ಷ ನಾಯಕ ಆರ್. ಅಶೋಕ್ ಸೇರಿದಂತೆ ಕೆಲವರು ಕುಮಾರ್ ನಾಯಕ್ ರಾಜೀನಾಮೆ ನೀಡಬೇಕೆಂದು ಸಾಮಾಜಿಕ ಜಾಲತಾಣ "ಎಕ್ಸ್" ನಲ್ಲಿ ಬರೆದುಕೊಂಡಿದ್ದಾರೆ.

**ಅಧಿಕಾರಿಗಳು ಬಲಿಪಶು:** ಜೆಡಿಎಸ್ "ಎಕ್ಸ್"ನಲ್ಲಿ ಅಭಿಪ್ರಾಯ ಪ್ರಕಟಿಸಿದ್ದು, ಕೋತಿ ತಾನು ಮೊಸರನ್ನ ತಿಂದು ಮೇಕೆ ಬಾಯಿಗೆ ಒರೆಸಿತು ಎಂಬ ಗಾದೆ ಮಾತಿನಂತಿದೆ ಮುಡಾ ಪ್ರಕರಣದ ಲೋಕಾಯುಕ್ತ ವರದಿ. ಮುಡಾ ನಿವೇಶನ ಹಂಚಿಕೆ ಹಗರಣದಲ್ಲಿ ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಪಾರ್ವತಿಗೆ ಲೋಕಾಯುಕ್ತ ಕ್ಲೀನ್‌ಚಿಟ್ ನೀಡಿದೆ. ಆದರೆ ಅಂದಿನ ಮೈಸೂರು ಜಿಲ್ಲಾಧಿಕಾರಿ, ಈಗಿನ ರಾಯಚೂರು ಕ್ಷೇತ್ರದ ಕಾಂಗ್ರೆಸ್ ಸಂಸದ ಕುಮಾರ್ ನಾಯಕ್ ಕರ್ತವ್ಯಲೋಪ ಎಸಗಿದ್ದಾರೆ ಎಂದು ವರದಿಯಲ್ಲಿ ಉಲ್ಲೇಖಿಸಿದ್ದಾರೆ. ಸಿದ್ದರಾಮಯ್ಯ ಮತ್ತು ಅವರ ಕುಟುಂಬವನ್ನು ರಕ್ಷಿಸಲು ಅಧಿಕಾರಿಗಳಿಂದಲೇ ಎಲ್ಲ ತಪ್ಪುಗಳಾಗಿವೆ ಎಂದು ಸಿದ್ಧ ವರದಿ ನೀಡಿ, ಅಧಿಕಾರಿಗಳನ್ನು ಬಲಿಪಶು ಮಾಡಲಾಗಿದೆ ಎಂದು ದೂರಲಾಗಿದೆ.

**ಸಾಕ್ಷ್ಯವಿದ್ದರೆ ಕೊಡಲಿ: ಪ್ರಿಯಾಂಕ್ ಖರ್ಗೆ:** ಕುಮಾರ್ ನಾಯಕ್ ರಾಜೀನಾಮೆಗೆ ವಿಪಕ್ಷದಲ್ಲಿ ಒತ್ತಾಯ ಹೆಚ್ಚಾಗುತ್ತಿದ್ದಂತೆ ಸಚಿವ ಪ್ರಿಯಾಂಕ್ ಖರ್ಗೆ ತನಿಖೆಯಲ್ಲಿ ಲೋಪವಿದ್ದರೆ ಹೇಳಲಿ ಎಂದು ತಿರುಗೇಟು ನೀಡಿದ್ದಾರೆ. ಲೋಕಾಯುಕ್ತ ವರದಿ 11 ಸಾವಿರ ಪುಟಗಳಷ್ಟಿವೆ. ನಾನಂತೂ ಓದಿಲ್ಲ. ಅಧಿಕಾರಿ ವಿರುದ್ಧ ವರದಿ ಕೊಟ್ಟರೆ, ರಾಜಕಾರಣಿಗಳನ್ನು ರಕ್ಷಿಸಲಾಗಿದೆ ಎಂದು ಬಿಜೆಪಿ ಆರೋಪಿಸುತ್ತದೆ. ಕೋವಿಡ್ ಹಗರಣದಲ್ಲಿ ಯಡಿಯೂರಪ್ಪ, ರಾಮುಲು ಅವರ ಪಾತ್ರದ ಬಗ್ಗೆ ನ್ಯಾ। ಡಿ'ಕುನ್ಹಾ ವರದಿ ಕೊಟ್ಟಾಗ ರಾಜಕಾರಣಿಗಳನ್ನಷ್ಟೇ ಗುರಿ ಮಾಡಿ, ಅಧಿಕಾರಿಗಳನ್ನು ರಕ್ಷಿಸಲಾಗುತ್ತಿದೆ ಎಂದು ಆರೋಪಿಸುತ್ತಾರೆ. ತನಿಖಾ ಪ್ರಕ್ರಿಯೆಯಲ್ಲಿ ಏನಾದರೂ ಲೋಪ ಇದ್ದರೆ ಹೇಳಲಿ, ಸಾಕ್ಷ್ಯ ಇದ್ದರೆ ಕೊಡಲಿ ಎಂದು ತಿಳಿಸಿದ್ದಾರೆ.

**ಕುಮಾರ್ ನಾಯಕ್ ಲೋಪದ ಬಗ್ಗೆ ಉಲ್ಲೇಖ:** ಮುಡಾ ಪ್ರಕರಣದ ತನಿಖೆ ನಡೆಸಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿರುವ ಮೈಸೂರು ಲೋಕಾಯುಕ್ತ ಪೊಲೀಸರು, ವರದಿಯಲ್ಲಿ ಅಂದಿನ ಮೈಸೂರು ಜಿಲ್ಲಾಧಿಕಾರಿಯಾಗಿದ್ದ ವೇಳೆ ಕುಮಾರ್ ನಾಯಕ್ ಲೋಪದ ಬಗ್ಗೆ ಉಲ್ಲೇಖೀಸಿ, ಅವರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಲು ಹೇಳಿದೆ. ಇವರ ಜತೆಗೆ ಹಿಂದಿನ ಮೈಸೂರಿನ ಹಿಂದಿನ ತಹಶೀಲ್ದಾರ್ ಮಾಳಿಗ ಶಂಕರ್, ಹಿಂದಿನ ರೆವಿನ್ಯೂ ಇನ್‌ಸ್ಪೆಕ್ಟರ್ ಸಿದ್ದಪ್ಪಾಜಿ, ಭೂಮಾಪಕ ಶಂಕರಪ್ಪರಿಂದ ಲೋಪವಾಗಿದೆ ಎಂದು ಹೇಳಲಾಗಿದೆ.

### ಮುಡಾ ನಿವೇಶನ ಹಂಚಿಕೆ ವೇಳೆ ಕರ್ತವ್ಯಲೋಪ ಎಸಗಿಲ್ಲ: ನಾಯಕ್

» **ರಾಯಚೂರು**

ಮುಡಾ ನಿವೇಶನ ಹಂಚಿಕೆ ವೇಳೆ ನಾನು ಜಿಲ್ಲಾಧಿಕಾರಿಯಾಗಿದ್ದು ಯಾವುದೇ ಕರ್ತವ್ಯಲೋಪ ಎಸಗಿಲ್ಲ. ಲೋಕಾಯುಕ್ತ ವರದಿ ಪರಿಶೀಲಿಸಿ ಪ್ರತಿಕ್ರಿಯೆ ನೀಡುತ್ತೇನೆ ಎಂದು ನಿವೃತ್ತ ಜಿಲ್ಲಾಧಿಕಾರಿ ಹಾಗೂ ರಾಯಚೂರು ಸಂಸದ ಜಿ. ಕುಮಾರ ನಾಯಕ್ ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಲೋಕಾಯುಕ್ತ ವರದಿ ಬಂದಿರುವ ಬಗ್ಗೆ ಮಾಧ್ಯಮಗಳಿಂದ ಗಮನಕ್ಕೆ ಬಂದಿದೆ. ನಾನು ಮೈಸೂರು ಜಿಲ್ಲಾಧಿಕಾರಿಯಾಗಿದ್ದಾಗ ನಿಯಮಾನುಸಾರವೇ ನಿವೇಶನ ಹಂಚಿಕೆ ಮಾಡಲಾಗಿದೆ. ಡಿನೋಟಿಫಿಕೇಷನ್ ಮಾಡಿಲ್ಲ. ನನ್ನ ಅವಧಿಯಲ್ಲಿ ಕರ್ತವ್ಯ ಲೋಪವಾಗಿದ್ದರೆ ಎದುರಿಸುತ್ತೇನೆ. ಭೂ ಪರಿವರ್ತನೆ ಎಲಿಯೇಷನ್ ಸಂದರ್ಭದಲ್ಲಿ ಭೂಮಿ ಅವರಿಗೆ ಸಂಬಂಧಿಸಿದೆಯೇ ಇಲ್ಲವೇ ಎಂಬುದನ್ನು ಅಷ್ಟೇ ಖಚಿತಪಡಿಸಿಕೊಳ್ಳುತ್ತೇವೆ. ಅದು ಬಿಟ್ಟು ಬೇರೆ ಅಂಶಗಳ ಬಗ್ಗೆ ಗಮನ ಹರಿಸುವುದಿಲ್ಲ. ಅಲ್ಲದೇ ಈಗಾಗಲೇ ಲೋಕಾಯುಕ್ತರ ವಿಚಾರಣೆಯಲ್ಲಿ ಆಡಳಿತಾತ್ಮಕ ಕ್ರಮಗಳ ಕುರಿತು ಮಾಹಿತಿ ನೀಡಲಾಗಿದೆ ಎಂದರು.

### ವ್ಯಕ್ತಿ ಕಾಣೆ

▪ **ದಾವಣಗೆರೆ**

ಹರಿಹರ ಗ್ರಾಮಾಂತರ ಪೊಲೀಸ್ ಠಾಣೆಯ ವ್ಯಾಪ್ತಿಯ ಬೆಳ್ಳೂಡಿ ಗ್ರಾಮದ ಪರಮೇಶ್ವರಚಾರಿ ತಂದೆ ಲೇ.ಈಶ್ವರಾಚಾರಿ 69 ವರ್ಷ, ಆಚಾರ್ಯ ಜನಾಂಗದವರು ಇವರು ಕಳೆದ 22 ನವಂಬರ್ 2023 ಮಧ್ಯಾಹ್ನ 12.30ಕ್ಕೆ ಮನೆಯಿಂದ ಹೋದವರು ವಾಪಾಸ್ ಮನೆಗೆ ಬಂದಿರುವುದಿಲ್ಲ. ಎಂದು ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ತಿಳಿಸಿದ್ದಾರೆ.

# ನಗರದಲ್ಲಿ ಶಿವಲಿಂಗಾನಂದ ಶ್ರೀಗಳ ಪಲ್ಲಕ್ಕಿ ಉತ್ಸವ

» **ಚಿತ್ರದುರ್ಗ**

ಕಳೆದ 22 ರಿಂದ ನಗರದ ಕರುವಿನ ಕಟ್ಟೆ ವೃತ್ತದಲ್ಲಿನ ಶ್ರೀ ಸದ್ಗುರು ಕಬೀರಾನಂದಾಶ್ರಮದಲ್ಲಿ ನಡೆಯುತ್ತಿರುವ ಶಿವನಾಮ ಸಪ್ತಾಹದ 95ನೇ ಶಿವರಾತ್ರಿ ಮಹೋತ್ಸವ ಕಾರ್ಯಕ್ರಮದಡಿಯಲ್ಲಿ ಇಂದು ಶ್ರೀ ಶಿವಲಿಂಗಾನಂದ ಶ್ರೀಗಳ ಪಲ್ಲಕ್ಕಿ ಉತ್ಸವ ಹಾಗೂ ಜನಪದ ಉತ್ಸವ ನಡೆಯಿತು.

ಶ್ರೀ ಕಬೀರಾನಂದಸ್ವಾಮಿ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಶ್ರೀಗಳ ಪಲ್ಲಕ್ಕಿ ಹಾಗೂ ಜಾನಪದ ಉತ್ಸವಕ್ಕೆ ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯರಾದ ಓಂಕಾರ್ ಚಾಲನೆಯನ್ನು ನೀಡಿದರು.

ವಿವಿಧ ರೀತಿಯ ಹೂಗಳಿಂದ ಅಲಂಕೃತವಾದ ಪಲ್ಲಕ್ಕಿಯಲ್ಲಿ ಪೀತಾಂಬರವನ್ನು ತೊಟ್ಟು ತಲೆಗೆ ಪೇಟವನ್ನು ಧರಿಸಿ ಕೈಯಲ್ಲಿ ರುದ್ರಾಕ್ಷಿಯನ್ನು ಹಿಡಿದು ವಿರಾಜಮನರಾದ ಶ್ರೀ ಶಿವಲಿಂಗಾನಂದ ಶ್ರೀಗಳು ದಾರಿಯುದ್ದಕ್ಕೂ ಭಕ್ತಾಧಿಗಳು ದರ್ಶನವನ್ನು ನೀಡಿದರು. ಮೆರವಣಿಗೆಯಲ್ಲಿ ಮಹಿಳೆಯರು ಕುಂಭಗಳನ್ನು ಹೊತ್ತು ಸಾಗುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು.

ಈ ಉತ್ಸವದಲ್ಲಿ ವೀರಗಾಸೆ, ಕೀಲು ಕುದುರೆ, ತಮಟೆ, ಜಾಂಜ್ ನೃತ್ಯ, ಕಿನ್ನರ ಜೋಗಿ, ಚಂಡೆ, ಲಂಬಾಣಿ ನೃತ್ಯ, ಖಾಸಬೇಡರ ಪಡೆ, ಡೊಳ್ಳು ಕುಣಿತ, ಕೋಲಾಟ, ಭಜನೆ, ತಟ್ಟೆರಾಯ, ಶಾರದಾ ಬ್ರಾಸ್ ಬ್ಯಾಂಡ್, ಕಹಳೆ, ಉರಿಮೆ, ಗೊರವಪ್ಪ, ಛತ್ರಿ ಚಾಮರ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳು ಈ ಉತ್ಸವದಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶನ ಮಾಡಿದರು.

ಇದರೊಂದಿಗೆ ಆದಿಚುಂಚನಗಿರಿ ಶಿಕ್ಷಣ







ಟ್ರಸ್ಟ್‌ನ ಜ್ಞಾನ ವಿಕಾಸ ಪಾಲಿಟೆಕ್ನಿಕ್ ಕಾಲೇಜಿನ ಸಿಬ್ಬಂದಿ, ಶ್ರೀ ಸದ್ಗುರು ಕಬೀರಾನಂದಸ್ವಾಮಿ ನರ್ಸಿಂಗ್ ಕಾಲೇಜು, ಪ್ರಥಮ ದರ್ಜೆ ಕಾಲೇಜು ಬಿ.ಇಡಿ. ಪಿಯು ಕಾಲೇಜು ಆಂಗ್ಲ ಶಾಲೆಯ ವಿದ್ಯಾರ್ಥಿಗಳು ಉತ್ಸವದಲ್ಲಿ ಪಾಲ್ಗೊಂಡಿದ್ದರು. ಶ್ರೀ ಕಬೀರಾನಂದ ಸ್ವಾಮಿ ಆಂಗ್ಲ ಮತ್ತು ಮಾಧ್ಯಮ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ದೇಶದ ವಿವಿಧ ರಾಜ್ಯದ ಉಡುಗೆಯನ್ನು ತೊಡುವುದರ ಮೂಲಕ ಭಾವೈಕ್ಯತೆಯನ್ನು ಮೆರೆದಿದ್ದಾರೆ, ಇದೇ ರೀತಿ ಮತ್ತೊಂದು ಶಾಲೆಯ ಮಕ್ಕಳು ರಾಜ್ಯದ ವಿವಿಧ ಜಿಲ್ಲೆಯ ಸಾಂಸ್ಕೃತಿಕ ಉಡುಗೆಯನ್ನು ಧರಿಸುವುದರ ಮೂಲಕ ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಉತ್ಸವವೂ ನಗರದ ಕಬೀರಾನಂದಾಶ್ರಮದಿಂದ ಪ್ರಾರಂಭವಾಗಿ ದೊಡ್ಡ ಗರಡಿ ರಸ್ತೆ, ದೊಡ್ಡಪೇಟೆ, ಮೈಸೂರ್ ಕಫೆ, ದೊಡ್ಡಪೇಟೆ, ಚಿಕ್ಕಪೇಟೆ, ಆನೆಬಾಗಿಲು, ಸಂತೇಪೇಟೆ ವೃತ್ತ, ಮೈಸೂರ್ ಬ್ಯಾಂಕ್ ವೃತ್ತ, ಪಾರ್ಶ್ವನಾಥ್ ಸ್ಕೂಲ್ ಮುಂಬಾಗ, ಶಾರದ ಬ್ರಾಸ್ ಬ್ಯಾಂಡ್ ಮನೆ ಮುಂಭಾಗ, ರಂಗಯ್ಯನ ಬಾಗಿಲು, ಉಜ್ಜಯಿನಿ ಮಠ, ಕರುವಿನಕಟ್ಟೆ ವೃತ್ತಯಿಂದ ಶ್ರೀಮಠವನ್ನು ತಲುಪಿತು. ದಾರಿಯುದ್ದಕ್ಕೂ ಶ್ರೀಗಳ ಭಕ್ತಾಧಿಗಳು ಸ್ವಾಮಿಗಳ ದರ್ಶನವನ್ನು ಪಡೆಯುವ ಸಲುವಾಗಿ ರಸ್ತೆ ಬದಿಯಲ್ಲಿ ಸಾಲುಗಟ್ಟಿ ನಿಂತಿದ್ದು, ಶ್ರೀಗಳಿಗೆ ಫಲ ಮತ್ತು ಹಾರ ಹಾಗೂ ಕಾಣಿಕೆಯನ್ನು ನೀಡುವುದರ ಮೂಲಕ ದರ್ಶನಾರ್ಶೀವಾದವನ್ನು ಪಡೆದರು.

ಈ ಸಂದರ್ಭದಲ್ಲಿ ಮುಖಂಡರಾದ ಗೋಪಾಲಸ್ವಾಮಿ ನಾಯ್ಕ್, ಪ್ರಶಾಂತ್, ನಾಗರಾಜ್ ಸಂಗಂ, ರಮೇಶ್, ಸತೀಶ್, ರುದ್ರೇಶ್ ಪ್ರಭಂಜನ್, ಪೈಲ್ವಾನ್ ತಿಪ್ಪೇಸ್ವಾಮಿ, ನಿರಂಜನಮೂರ್ತಿ, ಗಣಪತಿಶಾಸ್ತ್ರಿ, ತಿಪ್ಪೇಸ್ವಾಮಿ, ಯೋಗಿಶ್ ಮಂಜುನಾಥ್ ಗುಪ್ತ ಸೇರಿದಂತೆ ಇತರರು ಭಾಗವಹಿಸಿದ್ದರು.

ಫೆ. 27ರ ಬೆಳಿಗ್ಗೆ ಬ್ರಾಹ್ಮೀ ಮಹೋರ್ತದಲ್ಲಿ ಶಿವನಹಿಮ್ಮಾ ಸೂತ್ರ ವಿಭೂತಿ ಸ್ನಾನದೊಂದಿಗೆ ಸಪ್ತಾಹ ಸಮಾಪ್ತಿಯಾಗಲಿದೆ, ಸಂಜೆ 5.30ರಿಂದ ಸನ್ಯಾಸಿ ವಿಧಿಯಂತೆ ಕೌದಿ ಪೂಜೆ ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಕುಂಬಳಗೋಡಿನ ಎಸಿಎಂ ಮಠದ ಬಿಜಿಎಸ್ ಗ್ರೂಪ್‌ನ ವ್ಯವಸ್ಥಾಪಕ ನಿದೇಶಕರಾದ ಪ್ರಕಾಶನಾಥ್ ಶ್ರೀಗಳು, ನಾಗಲಕೋಟೆಯ ಸದ್ಗುರು ಶ್ರದ್ದಾನಂದ ಆಶ್ರಮದ ಶ್ರೀ ಕೈಲಾಸಪತಿನಾಥ್ ಶ್ರೀಗಳು, ಭಾಗವಹಿಸಲಿದ್ದಾರೆ.

## ಈದ್ಗಾ ಮೈದಾನ: 40 ಲಕ್ಷ ವೆಚ್ಚದ ಸ್ಲಾಬ್ ಕಾಮಗಾರಿ ವೀಕ್ಷಿಸಿದ ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**

ನಗರದ ಬೆಂಗಳೂರು ರಸ್ತೆಯಲ್ಲಿರುವ ಈದ್ಗಾ ಮೈದಾನದ ಪ್ರಾರ್ಥನಾ ಸ್ಥಳಕ್ಕೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅನುದಾನದಲ್ಲಿ 40 ಲಕ್ಷ ವೆಚ್ಚದಲ್ಲಿ ಸ್ಲಾಬ್ ನಿರ್ಮಾಣ ಕಾಮಗಾರಿ ಕಳೆದ ಜ.22ರಿಂದ ಆರಂಭವಾಗಿದ್ದು ಕಾಮಗಾರಿಯ ಪ್ರತಿಯನ್ನು ಶಾಸಕ ಟಿ.ರಘುಮೂರ್ತಿ ವೀಕ್ಷಿಸಿ ನಿರ್ದೇಶನ ನೀಡಿದರು.

ಅವರು, ಕಾಮಗಾರಿಯ ಪ್ರಗತಿಯನ್ನು ಅವಲೋಕಿಸಿ ಮುಸ್ಲಿಂ ಸಮುದಾಯದ ಮುಖಂಡರಿಗೆ ಬಹಳ ವರ್ಷಗಳ ಬೇಡಿಕೆಯನ್ನು ಈಡೇರಿಸಲಾಗುತ್ತಿದೆ. ಕಾಮಗಾರಿ ನಿರ್ಮಾಣಕ್ಕೆ ಅಗತ್ಯವಿರುವ ಹಣವನ್ನು ಈಗಾಗಲೇ ಬಿಡುಗಡೆ ಮಾಡಲಾಗಿದೆ. ಸಮುದಾಯದ ಮುಖಂಡರು ಆಗಮಿಸಿ ಗುಣಮಟ್ಟದ ಕಾಮಗಾರಿಯ ಬಗ್ಗೆ ಪರಿಶೀಲನೆ ನಡೆಸಬೇಕು ಎಂದರು.

ಸಮುದಾಯದ ಮುಖಂಡರಾದ ಅನ್ವರ್‌ಮಾಸ್ಟರ್, ಅತಿಕೂರ್‌ರೆಹಮಾನ್, ಎಸ್.ಎಚ್.ಸೈಯದ್, ಬಿ.ಫರೀದ್‌ಖಾನ್,



ಕೆ.ದಾದಾಪೀರ್ ಮುಂತಾದರು ಶಾಸಕರಿಗೆ ಮನವಿ ಮಾಡಿ, ಸ್ಲಾಬ್ ನಿರ್ಮಾಣದ ಕಾಮಗಾರಿ ಮುಗಿಯುವ ಹಂತದಲ್ಲಿದ್ದು, ಸುತ್ತಲು ಸಿಮೆಂಟ್ ಬೆಂಚ್‌ಗಳನ್ನು ನಿರ್ಮಿಸಿಕೊಡುವಂತೆ ಮನವಿ ಮಾಡಿದ್ದು, ಶಾಸಕರು ಪರಿಶೀಲಿಸುವಭರವಸೆ ನೀಡಿದರು. ಮಾಜಿಪುರಸಭಾ ಸದಸ್ಯ ಎಸ್. ಮುಜೀಬ್, ಕಲೀಂ, ಖಲೀಲ್, ಇಬ್ರಾಮ್, ಮಾರ್ಬಲ್‌ಸಲೀಂ, ಸರ್ವರ್‌ಸಾಬ್, ದಾವುದ್‌ಸಾಬ್, ಚಮನ್‌ಸಾಬ್, ಸಿ.ಆರ್. ಅಲ್ಲಾಬಕ್ಷಿ, ಅನಾಸ್ ಉಪಸ್ಥಿತರಿದ್ದರು.

## ರಾಜ್ಯಮಟ್ಟದ ಕೈಬರವಣಿಗೆ ಸ್ಪರ್ಧೆ: ಬಸವೇಶ್ವರ ಆಂಗ್ಲಮಾಧ್ಯಮಶಾಲೆ ಮಕ್ಕಳಿಗೆ ಬಹುಮಾನ.



» **ಚಳ್ಳಕೆರೆ**

ರಾಜ್ಯಮಟ್ಟದ ಕೈಬರವಣಿಗೆ ಸ್ಪರ್ಧೆಯಲ್ಲಿ ನಗರದ ಬಸವೇಶ್ವರ ಆಂಗ್ಲಮಾದ್ಯಮ ಶಾಲೆಯ ಮಕ್ಕಳು ಉತ್ತಮ ಕೈಬರವಣಿಗೆ ಬರೆದ ಹಿನ್ನೆಲೆಯಲ್ಲಿ ಬಹುಮಾನವನ್ನು ಪಡೆದಿದ್ದಾರೆ.

ಶಾಲೆಯ ವಿದ್ಯಾರ್ಥಿಗಳು ರಾಜ್ಯಮಟ್ಟದ ಸ್ಪರ್ಧೆಯಲ್ಲಿಬಹುಮಾನ ಪಡೆದಿರುವುದಕ್ಕೆ ವಿದ್ಯಾಸಂಸ್ಥೆಯ ಅಧ್ಯಕ್ಷ ವಿ.ಮಂಜುನಾಥ, ಕಾರ್ಯದರ್ಶಿ ಕೋಟೆಜಯಣ್ಣ ವಿದ್ಯಾರ್ಥಿಗಳನ್ನು ಹಾಗೂ ಮಾರ್ಗದರ್ಶನ ನೀಡಿದ ಶಿಕ್ಷಕರನ್ನು ಅಭಿನಂದಿಸಿದ್ದಾರೆ. ಬೆಂಗಳೂರಿನ ಎಕ್ಸ್‌ಪೋರ್ಟ್ ಹ್ಯಾಡ್‌ರೈಟಿಂಗ್ ತರಬೇತಿ ಕೇಂದ್ರ ಇತ್ತೀಚೆಗೆ ಶಿರಾದಲ್ಲಿ ರಾಜ್ಯಮಟ್ಟದ ಕೈಬರವಣಿಗೆ ತರಬೇತಿ ಸ್ಪರ್ಧೆಯನ್ನು ಏರ್ಪಡಿಸಿದ್ದು, ಉತ್ತಮ ಬರವಣಿಗೆಗಾಗಿ ಶಾಲೆಯ 6ನೇ ತರಗತಿ ವಿದ್ಯಾರ್ಥಿನಿ ಕೆ.ಎನ್.ಪ್ರಕೃತಿ ಪ್ರಥಮ ಬಹುಮಾನ, ಎನ್.ವಿ.ಶಶಾಂಕ್ ನಗದು ಬಹುಮಾನ, ಎಂ.ಪಿ.ಬಾರ್ಗವರಾಮ್, ಪಿ.ಜೀವನ್ ತೃತೀಯ ಬಹುಮಾನವನ್ನು ಪಡೆದಿದ್ದಾರೆ. ಶಾಲೆಯ ವಿದ್ಯಾರ್ಥಿಗಳಾದ ಎಸ್. ರಾಜೇಶ್ವರಿ, ಎನ್.ಪ್ರಣೀತಾ, ವಿ.ಸಿಂಧು, ಎಸ್.ವೈಷ್ಣವಿ, ಪಿ.ಸಂಧ್ಯ, ಎಲ್. ಕೆ.ಕುಮುದ ಸಮದಾನಕರ ಬಹುಮಾನವನ್ನು ಪಡೆದಿರುತ್ತಾರೆ. ಮುಖ್ಯ ಶಿಕ್ಷಕಿ ಎಂ.ಮಧುರ, ಶಿಕ್ಷಕಿ ಒ.ಅಶ್ವಿನಿ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಪಿ.ಮಹದೇವರಪುರ: ಸಬ್‌ಸ್ಟೇಷನ್ ನಿರ್ಮಾಣಕ್ಕೆ ಬೆಸ್ಕಾಂ ಇಲಾಖೆ ಒಪ್ಪಿಗೆ

# ಶೀಘ್ರದಲ್ಲೇ ಟೆಂಡರ್ ಪ್ರಕ್ರಿಯೆ: ಶಾಸಕರ ಮನವಿಗೆ ಬೆಸ್ಕಾಂ ಇಲಾಖೆ ಸ್ಪಂದನೆ

» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಪಿ.ಮಹದೇವಪುರ ಗ್ರಾಮದಲ್ಲಿ ಬೆಸ್ಕಾಂ ಇಲಾಖೆಯಿಂದ ಸಬ್‌ಸ್ಟೇಷನ್ ನಿರ್ಮಾಣ ಮಾಡುವ ಬಗ್ಗೆ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿರವರ ನಿರ್ದೇಶನ ಹಾಗೂ ರೈತ ಸಂಘಟನೆಗಳ ಮನವಿ ಮೇರೆಗೆ ಸಬ್‌ಸ್ಟೇಷನ್ ನಿರ್ಮಾಣಕ್ಕೆ ಬೆಸ್ಕಾಂ ಇಲಾಖೆ ಒಪ್ಪಿಗೆ ನೀಡಿ ಶೀಘ್ರದಲ್ಲೇ ಟೆಂಡರ್ ಕರೆಯಲಾಗುವುದು ಎಂದು ಬೆಸ್ಕಾಂನ ವ್ಯವಸ್ಥಾಪಕ ಪಂಕಜ್‌ಪಾಂಡೆ ತಿಳಿಸಿದ್ದಾರೆಂದು ಕಿಸಾನ್ ಸಂಘದ ಜಿಲ್ಲಾಧ್ಯಕ್ಷ ಎ.ನಾಗರಾಜು ಮಾಹಿತಿ ನೀಡಿದ್ದಾರೆ.

ಅವರು, ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ ಪರಶುರಾಮಪುರ ಹೋಬಳಿಯ ಪಿ.ಮಹದೇವಪುರ ಸಬ್‌ಸ್ಟೇಷನ್ ವ್ಯಾಪ್ತಿಯಲ್ಲಿ ಹೆಚ್ಚಿನ ಪ್ರಮಾಣದ ಟ್ರಾನ್ಸ್‌ಫಾರ್ಮರ್ ಹಾಗೂ ನೀರಾವರಿ ಪಂಪ್‌ಸೆಟ್ ಇದ್ದು ಆ ಭಾಗಕ್ಕೆ ಸಬ್‌ಸ್ಟೇಷನ್ ಅವಶ್ಯಕತೆ ಇತ್ತು. ಈ ಬಗ್ಗೆ ಪ್ರತಿಭಟನೆ ನಡೆಸಿದ ಕ್ಷೇತ್ರದ ಶಾಸಕರಿಗೆ ಮನವಿ ನೀಡಿದ ಹಿನ್ನೆಲೆಯಲ್ಲಿ ಶಾಸಕರು ಕೂಡಲೇ ಇಂಧನ ಸಚಿವರು ಹಾಗೂ ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಸಬ್‌ಸ್ಟೇಷನ್ ನಿರ್ಮಾಣ ಕುರಿತಂತೆ ತ್ವರಿತ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ ಮೂರೇ ದಿನದಲ್ಲಿ ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮನವಿಗೆ ಸಕರಾತ್ಮಕವಾಗಿ ಸ್ಪಂದಿಸಿ ಸಬ್ ಸ್ಟೇಷನ್ ನಿರ್ಮಾಣಕ್ಕೆ 17



ಕೋಟಿ ಟೆಂಡರ್ ಸಿದ್ದಪಡಿಸುವಂತೆ ಮುಖ್ಯ ಇಂಜಿನಿಯರ್ ಮುನಿರಾಜ್‌ಗೆ ನಿರ್ದೇಶನ ನೀಡಿರುತ್ತಾರೆ.

ಅಖಂಡ ಕರ್ನಾಟಕ ರೈತಸಂಘದ ಸಂಸ್ಥಾಪಕ ಅಧ್ಯಕ್ಷ ಕೆ.ರಂಗಸ್ವಾಮಿ, ಪಿ.ಮಹದೇವಪುರದಲ್ಲಿ ಸಬ್‌ಸ್ಟೇಷನ್ ನಿರ್ಮಾಣಕ್ಕೆ ಬೆಸ್ಕಾಂ ಇಲಾಖೆ ಶಾಸಕರ ಮಾರ್ಗದರ್ಶನದಲ್ಲಿ ಕಾರ್ಯೋನ್ಮುಖವಾಗಿರುವುದಕ್ಕೆ ಸಂತಸ ವ್ಯಕ್ತಪಡಿಸಿದರಲ್ಲದೆ, ಶಾಸಕರು ಹಾಗೂ ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಜಿಲ್ಲಾ ಸಂಘಟನಾ ಕಾರ್ಯದರ್ಶಿ ವೆಂಕಟರಮಣಪ್ಪ ಉಪಸ್ಥಿತರಿದ್ದರು.

## ಗುತ್ತಿಗೆ, ಹೊರ ಗುತ್ತಿಗೆ ನೌಕರರಿಗೆ ಗುಡ್ ನ್ಯೂಸ್: ಮಹತ್ವದ ಆದೇಶ ಹೊರಡಿಸಿದ ರಾಜ್ಯ ಸರ್ಕಾರ

**ಬೆಂಗಳೂರು:** ರಾಜ್ಯ ಸರ್ಕಾರದಿಂದ ಖಾಯಂ, ಗುತ್ತಿಗೆ, ಪರೋಕ್ಷವಾಗಿ ನೇಮಕಗೊಂಡಿರುವ ಅಧಿಕಾರಿಗಳು ಹಾಗೂ ನೌಕರರಿಗೆ ಸಾಮಾಜಿಕ ಭದ್ರತಾ ವ್ಯವಸ್ಥೆಯನ್ನು ಜಾರಿಗೆ ತರುವ ಅಥವಾ ವಿಸ್ತರಿಸುವ ಬಗ್ಗೆ ಕರ್ನಾಟಕ ಸರ್ಕಾರವು ಮಹತ್ವದ ಅದೇಶ ಹೊರಡಿಸಿದೆ.ಸರ್ಕಾರಿ ಇಲಾಖೆಗಳು, ಸರ್ಕಾರಿ ಸಂಸ್ಥೆಗಳು, ಮಂಡಳಿಗಳು, ನಿಗಮಗಳು ಇತ್ಯಾದಿಗಳಲ್ಲಿ ಇರುವ ಒಟ್ಟು ಉದ್ಯೋಗಿಗಳ ಸಂಖ್ಯೆ 11 ಲಕ್ಷಕ್ಕೂ ಹೆಚ್ಚು ಇದ್ದು, ಕರ್ನಾಟಕ ಸರ್ಕಾರವು ಮಾದರಿ ಉದ್ಯೋಗದಾತರಾಗಿ, ಸರ್ಕಾರಿ ಮತ್ತು ಇತರ ಸರ್ಕಾರಿ ಅಂಗ (ಸ್ವಾಯತ್ತ) ಸಂಸ್ಥೆಗಳ ವಿವಿಧ ಉದ್ಯೋಗಿಗಳಿಗೆ (ಖಾಯಂ/ ಗುತ್ತಿಗೆ/ಹೊರಗುತ್ತಿಗೆ ಇತ್ಯಾದಿ) ವಿವಿಧ ಕಲ್ಯಾಣ ಕ್ರಮಗಳನ್ನು (ಪಿಎಫ್, ಕೆಜಿಐಡಿ, ಇಎಸ್‌ಐ, ವೈದ್ಯಕೀಯ ಮರುಪಾವತಿ ಇತ್ಯಾದಿ) ಪರಿಚಯಿಸುವಲ್ಲಿ ನಿರಂತರವಾಗಿ ಪ್ರಮುಖ ಪಾತ್ರವಹಿಸುತ್ತಾ ಬಂದಿರುತ್ತದೆ.ಅಧಿಕಾರಿ/ನೌಕರರ ಸಾಮಾಜಿಕ ಭದ್ರತೆಯು ಸರ್ಕಾರದ ಪ್ರಮುಖ ವಿಷಯವಾಗಿರುವುದರಿಂದ ಸಾಮಾಜಿಕ ಭದ್ರತೆ ಇದ್ದಲ್ಲಿ, ನೌಕರರು ತಮ್ಮ ಸಾಮರ್ಥ್ಯಕ್ಕೆ ತಕ್ಕಂತೆ, ಕಾರ್ಯನಿರ್ವಹಿಸುತ್ತಾರೆ.ಇತ್ತೀಚೆಗೆ, ಅನೇಕ ಬ್ಯಾಂಕುಗಳು ಸರ್ಕಾರಿ ಅಧಿಕಾರಿಗಳು/ನೌಕರರು ತಮ್ಮ ಉಳಿತಾಯ ಬ್ಯಾಂಕ್ ಖಾತೆಗಳನ್ನು ತೆರೆಯಲು ಆಕರ್ಷಕ "ಸಂಬಳ ಪ್ಯಾಕೇಜ್‌ಗಳನ್ನು" ನೀಡುತ್ತಿವೆ, ಇದರಲ್ಲಿ ಅಧಿಕಾರಿಗಳು/ನೌಕರರಿಗೆ ವಿವಿಧ ರಿಯಾಯಿತಿಗಳು ಮತ್ತು ಅಧಿಕಾರಿ/ನೌಕರರ ಕುಟುಂಬಗಳಿಗೆ ಹೆಚ್ಚುವರಿ ಪ್ರಯೋಜನಗಳು ಸೇರಿವೆ.ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆ ಹಾಗೂ ಸಚಿವ ಸಂಪುಟದ ಸಭೆಯಲ್ಲಿ ತಿರ್ಮಾನಿಸಿದಂತೆ, ನೌಕರರ ಮತ್ತು ಅವಲಂಬಿತ ಕುಟುಂಬ ಸದಸ್ಯರ ಹಿತಾಸಕ್ತಿಗಳನ್ನು ರಕ್ಷಿಸುವ ಸಲುವಾಗಿ ಈ ಕೆಳಗಿನಂತೆ ಆದೇಶಿಸಲಾಗಿದೆ:ವಿವಿಧ ಬ್ಯಾಂಕುಗಳು ಒದಗಿಸುವ "ಸಂಬಳ ಪ್ಯಾಕೇಜ್‌ಗಳ" ಅಡಿಯಲ್ಲಿ ಖಾತೆಗಳನ್ನು ತೆರೆಯುವುದು/ ಆಯ್ಕೆ ಮಾಡಿಕೊಳ್ಳುವುದನ್ನು ಎಲ್ಲಾ ಅಧಿಕಾರಿ/ನೌಕರರಿಗೆ (ಸರ್ಕಾರಿ / ಸರ್ಕಾರಿ ಸಂಸ್ಥೆಗಳು, ಇತ್ಯಾದಿ) ಕಡ್ಡಾಯಗೊಳಿಸಿದೆ.

# ಜೀವನದ ಪ್ರೀತಿಗಾಗಿ......



- ಮನಸ್ಸಿಗೆ ಏನೋ ಕಿರಿಕಿರಿಯಾಗುತ್ತಿದೆಯೇ ?
- ಒಳಗೊಳಗೆ ಹೇಳಿಕೊಳ್ಳಲಾಗದ ಅಸಹನೆ ಉಂಟಾಗುತ್ತಿದೆಯೇ ?
- ಕೌಟುಂಬಿಕ ಸಂಬಂಧಗಳಲ್ಲಿ ಸಹಿಸಲಾಗದ ಮಾನಸಿಕ ಹಿಂಸೆಯಾಗುತ್ತಿದೆಯೇ ?
- ಹೊರ ಜಗತ್ತಿನ ನಮ್ಮ ಸುತ್ತಮುತ್ತಲಿನ ಅನೇಕ ಘಟನೆಗಳು ನಮ್ಮ ಇಚ್ಛೆಗೆ ವಿರುದ್ಧವಾಗಿ ಘಟಿಸುತ್ತಿದೆಯೇ ?
- ಮಾಧ್ಯಮ, ಗೆಳೆತನ, ಸಾಮಾಜಿಕ ಜಾಲತಾಣಗಳಲ್ಲಿ ನಮ್ಮ ನಂಬಿಕೆಗೆ ವಿರೋಧ ವ್ಯಕ್ತವಾಗುತ್ತಿದೆಯೇ ?
- ಧರ್ಮ ಜಾತಿ ಭಾಷೆ ಹಣಕಾಸು ಪಕ್ಷ ಸಂಪ್ರದಾಯ ಸಿದ್ಧಾಂತಗಳ ವಿಷಯದಲ್ಲಿ ಏನೋ ಒಂತರಾ ಕಸಿವಿಸಿ ಎನಿಸುವಂತೆ ಮನಸ್ಸಿಗೆ ತುಮಲವಾಗುತ್ತಿದೆಯೇ ?
- ಕೆಲವು ವಿಷಯಗಳ ಬಗ್ಗೆ ಬೇಗ ಕೋಪ ಬಂದು ಪ್ರತಿಕ್ರಿಯಿಸಿ ವಿರೋಧಿಗಳ ಸದ್ದಡಗಿಸಬೇಕು ಎಂಬ ಅಭಿಪ್ರಾಯ ಉಂಟಾಗಿ ಬಿಪಿ ಏರಿಕೆಯಾಗುತ್ತದೆಯೇ ?????????

ಈ ರೀತಿಯ ಕೆಲವು ಅಥವಾ ಎಲ್ಲವೂ ನಿಮ್ಮಲ್ಲಿ ಉಂಟಾಗುತ್ತಿದ್ದರೆ ಅದನ್ನು ನಿಯಂತ್ರಿಸಿಕೊಳ್ಳಲು ಕೆಲವು ಸಲಹೆ ರೂಪದ ಕಿವಿಮಾತುಗಳು ನಿಮಗಾಗಿ........

ನಿಮ್ಮ ಮನಸ್ಸನ್ನು ವಿಶಾಲಗೊಳಿಸಿಕೊಂಡರೆ ಖಂಡಿತವಾಗಿ ಈ ಸಮಸ್ಯೆಗಳಿಗೆ ಸಹಜ ಸ್ವಾಭಾವಿಕವಾಗಿ ಪರಿಹಾರ ಕಂಡುಕೊಳ್ಳಬಹುದು ಮತ್ತು ನೆಮ್ಮದಿಯಿಂದ ಬದುಕಿನ ಸಾರ್ಥಕತೆಯತ್ತ ಹೆಜ್ಜೆ ಹಾಕಬಹುದು....

ಹೇಗೆ ಮನಸ್ಸನ್ನು ವಿಶಾಲ ಮಾಡಿಕೊಳ್ಳುವುದು ????

**1 ನಮ್ಮ ಮೂಲ ನಿಷ್ಠೆಯನ್ನು ಪ್ರಕೃತಿಗೆ ವರ್ಗಾಯಿಸುವುದು........**

ನಮ್ಮನ್ನು ಹುಟ್ಟಿಸಿರುವ ಅಪ್ಪ ಅಮ್ಮ ನಾವು ಹುಟ್ಟಿಸುವ ಮಕ್ಕಳು ಸೇರಿ ಎಲ್ಲಾ ಸಂಬಂಧಗಳು ಒಂದು ಸಾಮಾಜಿಕ ವ್ಯವಸ್ಥೆಯೇ ಹೊರತು ಅದೇ ಅಂತಿಮವಲ್ಲ. ನಾವು ಸೃಷ್ಟಿಯ ಪ್ರತ್ಯೇಕ ಜೀವಿ. ನಮ್ಮ ಅಸ್ತಿತ್ವ ಸ್ವತಂತ್ರ. ಹುಟ್ಟಿಗೆ ಗಂಡು ಹೆಣ್ಣು ಒಂದು ಮಾರ್ಗ. ಅವರನ್ನು ವ್ಯಾವಹಾರಿಕ ಗುರುತಿಗಾಗಿ ತಂದೆ ತಾಯಿ ಮಗ ಮಗಳು ಮುಂತಾದ ಹೆಸರಿನಿಂದ ಕರೆಯಲಾಗುತ್ತದೆ. ಅದರ ಅರ್ಥ ನಾವು ಈ ಯಾವ ಸಂಬಂಧಗಳ ನಿಯಂತ್ರಣಕ್ಕೆ ಒಳಪಡಬಾರದು ಅಥವಾ ಒಳಪಡಿಸಬಾರದು. ಪರಸ್ಪರ ಪ್ರೀತಿಯ ವಿಶ್ವಾಸ ಸಹಕಾರ ಇರಬೇಕೇ ಹೊರತು ಹೆಚ್ಚಿನ ನಿರೀಕ್ಷೆ ನಿಯಂತ್ರಣ ನಮ್ಮ ದುಃಖ ಹೆಚ್ಚಿಸುತ್ತದೆ. ಅಪ್ಪ ಮಗ ಮಗಳು ನಮ್ಮ ವಿರುದ್ಧ ಅಭಿಪ್ರಾಯ ಅಥವಾ ನಡವಳಿಕೆ ಪ್ರದರ್ಶಿಸಿದರೆ ಅದನ್ನು ಸಹಜವಾಗಿ ಸ್ವೀಕರಿಸಿ ಮುಂದೆ ಹೋಗಬೇಕು. ಅವರು ನಮ್ಮವರು ನಮ್ಮ ವಿರುದ್ಧವಿದ್ದಾರೆ ಎಂದು ಕೊರಗುತ್ತಾ ಇರಬಾರದು. ನಾವು ಇರುವುದು ನಮಗಾಗಿ ಮಾತ್ರ....

**2 ಹುಟ್ಟಿದ ತಕ್ಷಣ ನಮ್ಮ ಮೇಲೆ ನಮ್ಮ ಧರ್ಮ ಜಾತಿ ಭಾಷೆ ವಂಶ ಎಲ್ಲವೂ ಹೇರಲ್ಪಡುತ್ತದೆ. ಇದು ಸ್ವಾಭಾವಿಕವಲ್ಲ............**

ಸಮಾಜ ಮತ್ತು ಆಡಳಿತದ ಅನುಕೂಲಕ್ಕಾಗಿ ರೂಪಿತವಾದ ನೀತಿ ನಿಯಮಗಳು. ಇವುಗಳ ಅರಿವು ಇರಬೇಕು. ಆದರೆ ಅದೇ ಶ್ರೇಷ್ಠ ಅದೇ ಅಂತಿಮ ಅದನ್ನು ಉಳಿಸುವುದೇ ನಮ್ಮ ಕರ್ತವ್ಯ ಮುಂತಾದ ಭ್ರಮೆಗೆ ಒಳಗಾಗಬಾರದು. ಅದೊಂದು ಅವಶ್ಯ ಮತ್ತು ಅನಿವಾರ್ಯ ಅಂಶಗಳೇ ಹೊರತು ನಾವು ಅಲ್ಲಿ ಹುಟ್ಟಿದ ಮಾತ್ರಕ್ಕೆ ಅವೆಲ್ಲವೂ ಶ್ರೇಷ್ಠ ಎಂದು ಭಾವಿಸಬಾರದು. ಆಗ ಇದರಿಂದ ಇತರರು ನಮ್ಮಂತೆ ಎಂಬ ಸಹಕಾರ ಭಾವ ಮೂಡುತ್ತದೆ. ದ್ವೇಷದ ಭಾವ ಕಡಿಮೆಯಾಗುತ್ತದೆ.

**3 ಇದು ಅತಿಮುಖ್ಯವಾದುದು.**

ನಾವು ನಮ್ಮ ಅರಿವಿನ - ಜ್ಞಾನದ - ತಿಳಿವಳಿಕೆಯ ಮೂಲವನ್ನು ಸ್ಪಷ್ಟವಾಗಿ ಮತ್ತು ವೈಯಕ್ತಿಕವಾಗಿ ಗುರುತಿಸಬೇಕು...... ಅಂದರೆ ನಮ್ಮ ತಿಳಿವಳಿಕೆಯ ಮೇಲೆ ಹೆಚ್ಚು ಪ್ರಭಾವ ಬೀರಿರುವುದು ಯಾವುದು ಎಂದು ಗಮನಿಸಬೇಕು. ತಂದೆ ತಾಯಿ ತಾತಾ ಅಜ್ಜಿ ಮಾವ ದೊಡ್ಡಪ್ಪ ಅಣ್ಣ ಅಕ್ಕ ಮುಂತಾದ ಸಂಬಂದಗಳೇ, ಅಥವಾ ಶಾಲೆ ಮತ್ತು ಅಲ್ಲಿನ ಉಪಾಧ್ಯಾಯರು ಅವರಲ್ಲಿ ಒಬ್ಬರು ಅಥವಾ ಎಲ್ಲರೂ ಆಗಿರಬಹುದು ಅಥವಾ ಬೀದಿಯ - ಊರಿನ ಆಕರ್ಷಕ ವ್ಯಕ್ತಿತ್ವದ ನಾಯಕ ಯಾರಾದರೂ ಆಗಿರಬಹುದು ಅಥವಾ ಪೌರಾಣಿಕದ, ಇತಿಹಾಸದ, ವರ್ತಮಾನದ ರಾಜಕೀಯ ಸಾಮಾಜಿಕ ಧಾರ್ಮಿಕ, ಸಿನಿಮಾ, ಸಾಹಿತ್ಯ, ಸಂಗೀತ ಅಥವಾ ಇತರೆ ಯಾರಾದರೂ ಆಗಿರಬಹುದು ಅಥವಾ ನೀವು ಹುಟ್ಟಿದ, ಓದಿದ ಯಾವುದಾದರೂ ಧರ್ಮ ಅಥವಾ ಧರ್ಮ ಗ್ರಂಥಗಳಾಗಿರಬಹುದು ಅಥವಾ ಬುದ್ಧ ಬಸವ ವಿವೇಕಾನಂದ ಆಚಾರತ್ರಯರು, ಗಾಂಧಿ, ಅಂಬೇಡ್ಕರ್ ರೀತಿಯ ಯಾರಾದರೂ ಆಗಿರಬಹುದು ಅಥವಾ ನೀವು ಬೆಳೆದ ಅಥವಾ ನೋಡಿದ ಪರಿಸರವೇ ಆಗಿರಬಹುದು. ಇದರಲ್ಲಿ ಒಂದು ಅಥವಾ ಎಲ್ಲವೂ ಆಗಿರಬಹುದು. ಇದನ್ನು ನಾವು ಮನನ ಮಾಡಿಕೊಂಡರೆ ನಮಗೆ ಯೋಚಿಸುವ ದಿಕ್ಕು ಸುಲಭವಾಗಿ ಸಿಗುತ್ತದೆ. ಹೇಗೆಂದರೆ ನಾವು ಯೋಚಿಸುವುದು ಒಂದು ಮೂಲವಾದರೆ ಅದರ ಇನ್ನಷ್ಟು ಮೂಲಗಳು ಇವೆ ಎಂದು ಅರ್ಥಮಾಡಿಕೊಳ್ಳಬಹುದು. ಇದರಿಂದಾಗಿ ಮನಸ್ಸನ್ನು ವಿಶಾಲ ಗೊಳಿಸಿಕೊಳ್ಳಲು ತುಂಬಾ ತುಂಬಾ ಸಹಾಯವಾಗುತ್ತದೆ....

**4 ಈ ಎಲ್ಲದರ ನಡುವೆ ವ್ಯಾವಹಾರಿಕ ಜಗತ್ತಿನ ಅನಿವಾರ್ಯತೆಯನ್ನು ಮರೆಯಬಾರದು...........**

ಅದು ಸರಿಯಾಗಿ ಇಲ್ಲದಿದ್ದರೆ ಮೇಲೆ ಹೇಳಿದ ವಿಷಯಗಳು ವಾಸ್ತವದಲ್ಲಿ ವಿಫಲವಾಗುವ ಸಾಧ್ಯತೆಯೇ ಹೆಚ್ಚು. ಬದಲಾವಣೆಗಳನ್ನು ಸ್ವೀಕರಿಸುತ್ತಾ, ನಮ್ಮ ಅನುಕೂಲಕ್ಕೆ ತಕ್ಕಂತೆ ಅದನ್ನು ಹೊಂದಿಸಿಕೊಳ್ಳುತ್ತಾ ಅದರಲ್ಲಿ ನಿರಂತರತೆಯನ್ನು ಕಾಪಾಡಬೇಕು. ಮುಖ್ಯವಾಗಿ ಪಾಸ್ಟ್ ಪುಡ್ ಸಂಸ್ಕೃತಿಯನ್ನು ಆದಷ್ಟೂ ತಿರಸ್ಕರಿಸಬೇಕು. ಇಂದಿನ ನಮ್ಮ ಬಹುತೇಕ ಅಸಹನೆ ಅತೃಪ್ತಿಗೆ ಇದೇ ಬಹುಮುಖ್ಯ ಕಾರಣವಾಗಿದೆ. ಒಮ್ಮೆ ಇದನ್ನು ನಿಯಂತ್ರಿಸಿ ಸಾಧ್ಯವಾದಷ್ಟು ತಾಳ್ಮೆಗೆ ಶರಣಾದರೆ ಮನಸ್ಸು ನಿರ್ಮಲತೆಯತ್ತ ಸಾಗುತ್ತದೆ. ಆಗ ಸಹಜವಾಗಿ ಒತ್ತಡ ಕಡಿಮೆಯಾಗಿ ಮನಸ್ಸು ವಿಶಾಲವಾಗುತ್ತದೆ.

**5 ಈ ಎಲ್ಲವನ್ನೂ ಸಾಧ್ಯವಾಗಿಸಲು ನಿಮ್ಮ ದೈಹಿಕ ಆರೋಗ್ಯ ಬಹುಮುಖ್ಯ........**

ಅದಿಲ್ಲದೇ ಯಾವುದನ್ನೂ ನಿರೀಕ್ಷಿಸಲು ಸಾಧ್ಯವಿಲ್ಲ. ಅದನ್ನು ನಮ್ಮ ನಮ್ಮ ಅವಕಾಶ ಮತ್ತು ಮಿತಿಯಲ್ಲಿ ಕಡ್ಡಾಯವಾಗಿ ಸೈನಿಕ ಶಿಸ್ತು ರೂಪಿಸಿಕೊಳ್ಳಲು ಪ್ರಯತ್ನಿಸಲೇಬೇಕು. ಏಕೆಂದರೆ ಬಹುತೇಕ ದುರ್ಬಲ ಆರೋಗ್ಯದ ಜನರು ಹೆಚ್ಚು ಉದ್ವೇಗ ಮತ್ತು ನಿರಾಸೆಗೆ ಒಳಗಾಗುತ್ತಾರೆ. ಮನಸ್ಸಿನ ನಿಯಂತ್ರಣ ಕಳೆದುಕೊಂಡು ಇತರರನ್ನು ದೂಷಿಸುತ್ತಾರೆ. ಮನಸ್ಸಿನ ವಿಶಾಲತೆಗೆ ಇದು ಅಡ್ಡಿಯಾಗಬಹುದು.... ಕೊನೆಯದಾಗಿ,ಇದಷ್ಟೇ ಅಲ್ಲದೆ ಇನ್ನೂ ನಿಮ್ಮ ಒಳ ಮನಸ್ಸಿಗೆ ಹೊಳೆಯುವ ಯಾವುದಾದರೂ ವಿಷಯವಾಗಿರಬಹುದು. ಅದನ್ನು ಉಪಯೋಗಿಸಿಕೊಂಡು ನಿಮ್ಮ ಮನಸ್ಸುಗಳನ್ನು ವಿಶಾಲಗೊಳಿಸಿಕೊಳ್ಳಿ. ಖಂಡಿತವಾಗಿಯೂ ನಿಮ್ಮ ಜೀವನಮಟ್ಟ ತನ್ನಿಂದ ತಾನೇ ಈಗಿರುವ ಸ್ಥಾನಕ್ಕಿಂತ ಉತ್ತಮ ಮಟ್ಟಕ್ಕೆ ಏರುತ್ತದೆ. ಆ ಪ್ರಜ್ಞೆಯೇ ಒಂದು ಅದ್ಭುತ ಮಾನವ ಪ್ರೇಮದ ಸಂಕೇತ. ಸಮಾಜ ಪ್ರೀತಿಯ, ಜೀವನೋತ್ಸಾಹದ, ದೇಶ ಭಕ್ತಿಯ ಅನುಸಂಧಾನ,

ಸಾಧ್ಯವಾದರೆ ಪ್ರಯತ್ನಿಸಿ......... ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

# ಮೊಳಕಾಲ್ಮೂರು ಆರ್ಥಿಕವಾಗಿ ಹಿಂದುಳಿದಿದೆ: ಶಾಸಕ ಶ್ರೀನಿವಾಸ್



» ಮೊಳಕಾಲ್ಮೂರು

ಮೊಳಕಾಲ್ಮೂರು ಮತ್ತು ಕೂಡ್ಲಿಗಿ ತಾಲೂಕುಗಳು ನಂಜುಂಡಪ್ಪ ವರದಿ ಪ್ರಕಾರ ಅತ್ಯಂತ ಹಿಂದುಳಿದ ಪ್ರದೇಶಗಳಾಗಿದ್ದು ಇಲ್ಲಿನ ಸಾಂಸ್ಕೃತಿಕ ಸಂಬಂಧಗಳು ಶ್ರೀಮಂತಿಕೆಯಿಂದ ಕೂಡಿವೆ ಎಂದು ಕೂಡ್ಲಿಗಿ ಶಾಸಕ ಡಾ.ಎನ್ .ಟಿ. ಶ್ರೀನಿವಾಸ್ ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ಬಿ.ಜಿ.ಕೆರೆ ಸಮೀಪದ ಸಿದ್ದಯ್ಯನ ಕೋಟೆ ಗ್ರಾಮದ ಚಿತ್ತರಗಿ ಶ್ರೀ ವಿಜಯ ಮಾಂತೇಶ್ವರ ಶಾಖಾ ಮಠ .ಚಿತ್ತರಗಿ ಸಾಂಸ್ಕೃತಿಕ ಕಲಾ ವೇದಿಕೆ(ರಿ) ಬಸವ ಅಂಬೇಡ್ಕರ್ ಜನ ಕಲ್ಯಾಣ ಸಂಸ್ಥೆ (ರಿ),ಬಿ.ಜಿ.ಕೆರೆ

ಹಾಗೂ ಅಕ್ಷರ ಐ ಫೌಂಡೇಶನ್ , ತುಮಕೂರು ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.ಮೊಳಕಾಲ್ಮೂರು ತಾಲ್ಲೂಕಿನ ಜನತೆ ಇಂದಿಗೂ ಆರ್ಥಿಕ ಸಂಕಷ್ಟ ಅನುಭವಿಸುತ್ತಿರುವುದು ಬೇಸರದ ಸಂಗತಿಯಾಗಿದ್ದುಸರ್ಕಾರವು ಈ ಭಾಗದಲ್ಲಿ ಉದ್ಯಮಗಳನ್ನು ಸ್ಥಾಪಿಸಿ ನಿರುದ್ಯೋಗಿ ಯುವಕರಿಗೆ ಉದ್ಯೋಗ ನೀಡಬೇಕಿದೆ ಎಂದರು,ನಮ್ಮ ತಂದೆ ಮಾಜಿ ಶಾಸಕ ಎನ್. ಟಿ. ಬೊಮ್ಮಣ್ಣ ಕಾಲದಿಂದಲೂ ಶ್ರೀಮಠದೊಂದಿಗೆ ಕೈ ಜೋಡಿಸಿ ಜನರ ಅಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮಗಳನ್ನು ರೂಪಿಸಿ ತಮ್ಮದೇ ಆದ ಮಾರ್ಗದಲ್ಲಿ ಸೇವೆ ಸಲ್ಲಿಸಿದ್ದೇವೆ ಎಂದರು,ಶಿಬಿರದಲ್ಲಿ ಮೊಳಕಾಲ್ಮೂರು ತಾಲೂಕಿನ ಗಡಿ ಭಾಗದ ಗ್ರಾಮಗಳು ಹಾಗೂ ಕೂಡ್ಲಿಗಿ ತಾಲೂಕಿನ ಚಿರತೆಗುಂಡು .ಗಂಡ ಬೊಮ್ಮನಹಳ್ಳಿ, ಹುರುಳಿಹಾಳ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಜನರು ಪಾಲ್ಗೊಂಡು ತಮ್ಮ ಕಣ್ಣಿನ ತಪಾಸಣೆ ,ವೈದ್ಯರ ಸಲಹೆಯೊಂದಿಗೆ ಔಷಧಿ ಮತ್ತು ಕನ್ನಡಕ ಪಡೆದುಕೊಂಡರು,ಶಿಬಿರದಲ್ಲಿ ಸುಮಾರು 800 ಜನರು ನೇತ್ರ ಪರೀಕ್ಷೆ ಮಾಡಿಸಿಕೊಂಡರು ಅದರಲ್ಲಿ 180 ಜನರಿಗೆ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆಗೆ ನೋಂದಣಿ ಮಾಡಿಸಿದೆ,20 ಜನರಿಗೆ ವಿಶೇಷ ಕಣ್ಣಿನ ತಜ್ಞರ ಸಲಹೆಗೆ ನೋಂದಣಿ ಮಾಡಿಸಲಾಯಿತು. ಕಾರ್ಯಕ್ರಮದಲ್ಲಿ ಮೊಳಕಾಲ್ಮೂರು ಶಾಸಕ ಎನ್. ವೈ .ಗೋಪಾಲಕೃಷ್ಣ, ಚಿತ್ತರಗಿ ವಿಜಯ ಮಂತೇಶ್ವರ ಸಂಸ್ಥಾನ ಶಾಖಾ ಮಠದ ಪೀಠಾಧ್ಯಕ್ಷರಾದ ಮ.ನಿ.ಪ್ರ. ಬಸವಲಿಂಗ ಸ್ವಾಮೀಜಿ, ಕಾರ್ಯದರ್ಶಿ ಪಿ .ಆರ್. ಕಾಂತರಾಜ. ಪಿ.ಆರ್ .ಕೆ. ತುಳಸಿ, ಲಕ್ಷ್ಮಣ. ಮರಿಸ್ವಾಮಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T